EMAIL : dairyadadaari@gmail.com ಸಂಪುಟ: 01 ಸಂಚಿಕೆ: 61
ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಮಂಗಳವಾರ: 10-02-2026

# ಐಪಿಎಲ್ ಪಂದ್ಯಗಳನ್ನು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಸಲು ನಾಳೆ ನಿರ್ಧಾರ

**ಬೆಂಗಳೂರು, ಫೆ. 9–** ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಕ್ರಿಕೆಟ್ ಪಂದ್ಯಾವಳಿಗಳನ್ನು ನಡೆಸಲು ಅನುಮತಿ ನೀಡುವ ಬಗ್ಗೆ ಇದೇ ಬುಧವಾರ ಫೆ. 11 ರಂದು ಒಂದು ಸೂಕ್ತ ನಿರ್ಧಾರವನ್ನು ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು. ಬೆಂಗಳೂರಿನ ಸದಾಶಿವನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂ ಗಣದಲ್ಲಿ ಐಪಿಎಲ್ ಕ್ರಿಕೆಟ್ ಪಂದ್ಯಾವಳಿ ಗಳನ್ನು ಆಯೋಜಿಸಲು ಅವಕಾಶ ನೀಡುವ ಸಂಬಂಧ ಇಂದು ಬೆಳಿಗ್ಗೆ ಕರ್ನಾಟಕ ಕ್ರಿಕೆಟ್ ಸಂಸ್ಥೆ ಅಧ್ಯಕ್ಷರಾದ ವೆಂಕಟೇಶ್‌ಪ್ರಸಾದ್, ವಕ್ತಾರ ವಿನಯ್ ಮೃತ್ಯುಂಜಯ ಹಾಗೂ ಆರ್‌ಸಿಬಿ ಪ್ರತಿನಿಧಿ ರಾಜೇಶ್ ಮೆನನ್ ಅವರು ತಮ್ಮನ್ನು ಭೇಟಿಯಾಗಿ ಮನವಿ ಮಾಡಿದ್ದಾರೆ ಎಂದರು.

ಕಳೆದ ಮಾರ್ಚ್‌ನಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತ ಘಟನೆಯಿಂದ 11 ಮಂದಿ ಮೃತಪಟ್ಟ ನಂತರ ರಾಜ್ಯ ಸರ್ಕಾರ ನ್ಯಾ. ಕುನ್ಹಾ ಅವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಿತ್ತು. ನ್ಯಾ. ಕುನ್ಹಾ ಅವರು ಕ್ರಿಕೆಟ್ ಪಂದ್ಯಾವಳಿಯ ವೇಳೆ ಏನೆಲ್ಲಾ ಸುರಕ್ಷತಾ ಕ್ರಮಗಳು ಆಗಬೇಕು ಎಂಬ ಬಗ್ಗೆ ಶಿಫಾರಸ್ಸುಗಳನ್ನು ಮಾಡಿದ್ದರು. ಈ ಶಿಫಾರಸ್ಸುಗಳ ಅಧ್ಯಯನ ಮಾಡಿ ಕೆಸಿಎಗೆ ಈ ಶಿಫಾರಸ್ಸುಗಳನ್ನು ಜಾರಿ ಮಾಡುವಂತೆ ಸೂಚನೆ ನೀಡಲಾಗಿತ್ತು ಹಾಗೂ ಇದರ ಮೇಲ್ವಿಚಾರಣೆಗೆ ಸರ್ಕಾರ ಜಿಬಿಎ ಆಯುಕ್ತರು ಹಾಗೂ ನಗರ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಿತ್ತು ಎಂದರು. ಈಗ ಐಪಿಎಲ್ ಪಂದ್ಯಾವಳಿ ಆರಂಭವಾಗುತ್ತಿದೆ. ಹಾಗಾಗಿ ಬೆಂಗಳೂರಿನಲ್ಲಿ ಪಂದ್ಯಾವಳಿ ಆಯೋಜಿಸಲು ಅನುಮತಿ ಕೊಡಿ ಎಂದು ಕೆಸಿಎ ಹಾಗೂ ಆರ್‌ಸಿಬಿ ಮನವಿ ಮಾಡಿದೆ. ಹಾಗಾಗಿ ಇದೇ ಬುಧವಾರ ಉನ್ನತ ಅಧಿಕಾರಿಗಳ ಸಭೆ ಕರೆದಿದ್ದೇನೆ. ಈ ಸಭೆಯಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಏನೆಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ನ್ಯಾ. ಖುನ್ನಾ ಸಮಿತಿ ವರದಿಯ ಶಿಫಾರಸ್ಸುಗಳು ಅನುಷ್ಠಾನವಾಗಿದೆಯೇ ಎಂಬ ಬಗ್ಗೆ ಚರ್ಚಿಸುತ್ತೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಜತೆಗೂ ಈ ಸಂಬಂಧ ಚರ್ಚೆ ಮಾಡಬೇಕಿದೆ. ಹಾಗಾಗಿ ಬುಧವಾರ ಐಪಿಎಲ್ ಪಂದ್ಯಗಳಿಗೆ ಬೆಂಗಳೂರಿಗೆ ಅವಕಾಶ ನೀಡುವ ಬಗ್ಗೆ ಒಂದು ತೀರ್ಮಾನ ಮಾಡುತ್ತೇವೆ ಎಂದರು.

ಸರ್ಕಾರಕ್ಕೆ ಪ್ರೇಕ್ಷಕರ ಸುರಕ್ಷತೆ ಮುಖ್ಯ. ಕಾಲ್ತುಳಿತದಂತಹ ಘಟನೆಗಳು ಮರುಕಳಿಸಬಾರದು. ಹಾಗಾಗಿ ಎಲ್ಲದರ ಬಗ್ಗೆಯೂ ಸಮಗ್ರ ಚರ್ಚೆ ನಡೆಸಿ ಸೂಕ್ತ ತೀರ್ಮಾನವನ್ನು ಮಾಡುತ್ತೇವೆ ಎಂದು ಅವರು ತಿಳಿಸಿದರು.

ಬುಧವಾರ ನಡೆಯಲಿರುವ ಸಭೆಯಲ್ಲಿ ಜಿಬಿಎ ಆಯುಕ್ತರು,



ನಗರ ಪೊಲೀಸ್ ಆಯುಕ್ತರು, ಇಂಧನ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಮುಖ್ಯಸ್ಥರುಗಳು ಹಾಗೂ ಉನ್ನತಾಧಿಕಾರಿಗಳು ಪಾಲ್ಗೊಳ್ಳುವರು. ಎಲ್ಲವನ್ನು ಚರ್ಚಿಸಿ ಒಂದು ತೀರ್ಮಾನಕ್ಕೆ ಬರುತ್ತೇವೆ ಎಂದು ಅವರು ಹೇಳಿದರು. ಈ ಹಿಂದೆ ರಾಜ್ಯ ಸರ್ಕಾರ ಬೆಂಗಳೂರಿನಲ್ಲಿ ಕ್ರಿಕೆಟ್ ಪಂದ್ಯಾವಳಿಗಳನ್ನು ಆಯೋಜಿಸಲು ಷರತ್ತು ಬದ್ಧ ಅನುಮತಿ ನೀಡಿತ್ತು. ನ್ಯಾ. ಕುನ್ಹಾ ವರದಿಯ ಶಿಫಾರಸ್ಸುಗಳ ಅನುಷ್ಠಾನಕ್ಕೂ ಸೂಚಿಸಿತ್ತು. ನ್ಯಾ. ಕುನ್ಹಾ ಅವರು ಚಿನ್ನಾಸ್ವಾಮಿ ಕ್ರೀಡಾಂಗಣದಲ್ಲಿ ಪ್ರೇಕ್ಷಕರ ಸುರಕ್ಷತೆಗೆ ಏನೆಲ್ಲಾ ಕ್ರಮಗಳಾಗಬೇಕು ಎಂಬ ಬಗ್ಗೆ ಶಿಫಾರಸ್ಸುಗಳನ್ನು ಮಾಡಿದ್ದರು. ಇವುಗಳಲ್ಲಿ ಕ್ರೀಡಾಂಗಣದ ಗೇಟ್ ಅಗಲ, ಸುರಕ್ಷತಾ ಕ್ರಮಗಳು, ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ಹಲವು ಕ್ರಮಗಳಾಗಬೇಕು ಎಂದು ಕುನ್ಹಾ ಅವರು ತಮ್ಮ ಶಿಫಾರಸ್ಸಿನಲ್ಲಿ ಹೇಳಿದ್ದರು. ಇವುಗಳನ್ನು ಅನುಷ್ಠಾನಗೊಳಿಸುವಂತೆ ರಾಜ್ಯ ಸರ್ಕಾರ ರಾಜ್ಯ ಕ್ರಿಕೆಟ್ ಸಂಸ್ಥೆಗೆ ಸೂಚಿಸಿತ್ತು. ಅದರಂತೆ ರಾಜ್ಯ ಕ್ರಿಕೆಟ್ ಸಂಸ್ಥೆ ತನ್ನ ಕ್ರಮಗಳನ್ನು ಕೈಗೊಂಡಿದೆ ಎಂದು ಹೇಳಲಾಗಿದೆ.

ಈ ಬಗ್ಗೆ ಇಂದು ಗೃಹ ಸಚಿವರನ್ನು ಭೇಟಿ ಮಾಡಿದ ಕೆಸಿಎ ನಿಯೋಗ ಹಲವಾರು ವಿಚಾರಗಳನ್ನು ಗೃಹ ಸಚಿವರ ಗಮನಕ್ಕೆ ತಂದಿದೆ ಎನ್ನಲಾಗಿದೆ.

ಅಂತಿಮವಾಗಿ ಬುಧವಾರ ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯಾವಳಿಗಳಿಗೆ ಅನುಮತಿ ಸಿಗುತ್ತದೋ ಇಲ್ಲವೋ ಎಂಬುದು ನಿರ್ಧಾರವಾಗುತ್ತದೆ.

# ಕಲಾತಂಡಗಳು ಸ್ಥಳೀಯ ಭಾಷೆಯಲ್ಲಿ ಜಾಗೃತಿ ಮೂಡಿಸಿ: ಡಾ.ಸುರೇಂದ್ರ ಬಾಬು




ಧೈರ್ಯದ ದಾರಿ

**ರಾಯಚೂರು,ಫೆ.9–** ಗ್ರಾಮೀಣ ಭಾಗದ ಉಪಕೇಂದ್ರ ಮಟ್ಟದಿಂದ ಮೇಲ್ಮಟ್ಟದ ಆಸ್ಪತ್ರೆಯ ಸೌಲಭ್ಯವನ್ನು ಜನರು ಪಡೆಯಲು ಕಲಾತಂಡಗಳು ಸ್ಥಳೀಯ ಆಡು ಭಾಷೆಯಲ್ಲಿ ಜಾಗೃತಿಯನ್ನು ಮೂಡಿಸಬೇಕು. ತಾಯಿ ಮಕ್ಕಳ ಆರೈಕೆ, ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ತಮ್ಮದೆ ಆದ ಕೊಡುಗೆ ನೀಡಬೇಕೆಂದರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.

ಇತ್ತಿಚೀಗೆ ನಗರದ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವಾಹಿತಿ ಶಿಕ್ಷಣ ಸಂವಹನ ವಿಭಾಗದಿಂದ ಆರೋಗ್ಯ ಅಭಿಯಾನದಡಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಜಾನಪದ ಕಲಾ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನಿಮ್ಮ ಆರೋಗ್ಯ–ನಮ್ಮ ಆಧ್ಯತೆ ಎಂಬ ಧ್ಯೆಯವಾಕ್ಯದೊಂದಿಗೆ ಉಪಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಯಿಮಕ್ಕಳ ಆಸ್ಪತ್ರೆ, ತಾಲೂಕು, ಜಿಲ್ಲಾ ಆಸ್ಪತ್ರೆ, ವೈದ್ಯಕೀಯ ಕಾಲೇಜುಗಳ ಮೂಲಕ ನುರಿತ ತಜ್ಞರು, ಅತ್ಯಾಧುನಿಕ ವೈದ್ಯಕೀಯ ಉಪಕರಣಗಳ ಮೂಲಕ ಉಚಿತವಾಗಿ ಸುರಕ್ಷಿತ ಹೆರಿಗೆ ಸೇವೆ, ರಕ್ತಹೀನತೆ ತಡೆ, ತಾಯಿ ಎದೆಹಾಲಿನ ಮಹತ್ವ, ಲಸಿಕೆಗಳು, ಹದಿಹರಿಯದವರ ಆರೋಗ್ಯ ಸಮಸ್ಯೆಗಳು, ಅಗತ್ಯವುಳ್ಳವರಿಗೆ ರಕ್ತ ಒದಗಿಸುವಿಕೆ, ಉಚಿತ ಕನ್ನಡಕ ವಿತರಣೆ, ಕಣ್ಣಿನ ಪೋರೆ ಶಸ್ತ್ರಚಿಕಿತ್ಸೆ, ದಂತಭಾಗ್ಯದಡಿ ಹಲ್ಲಿನ ಸೇಟ್ ಅಳವಡಿಕೆ, ಸಂತಾನ ನಿರೋಧಕ ಶಸ್ತ್ರಚಿಕಿತ್ಸೆ, ಹೃದಯ ಆರೈಕೆಗಾಗಿ ಡಾ ಪುನೀತ್ ರಾಜಕುಮಾರ್ ಹೃದಯಜ್ಯೋತಿ ಯೋಜನೆ, ಕಿಡ್ನಿ ಆರೈಕೆಗೆ ಡಯಾಲಿಸಿಸ್ ಸೇವೆ ಮುಂತಾದವುಗಳನ್ನು ಯಾವುದೇ ಖಾಸಗಿ ಆಸ್ಪತ್ರೆಗಳಿಗೆ ಕಡಿಮೆ ಇಲ್ಲದಂತೆ ಸೇವೆ ನೀಡಲಾಗುತ್ತಿದೆ.

ಬಾಲ್ಯವಿವಾಹ ತಡೆ, ಭ್ರೂಣ ಲಿಂಗಪತ್ತೆ ನಿಷೇಧ ಕಾಯ್ದೆಯಡಿ ದಂಡ ಜೈಲು ಶಿಕ್ಷೆ, ನಗುಮಗು, 108 ಆಂಬ್ಯುಲೆನ್ಸ್ ಸೇವೆ, ಸಮುದಾಯದಲ್ಲಿ ಕಂಡುಬರಬಹುದಾದ ಸಾಂಕ್ರಾಮಿಕ ರೋಗಗಳ ತಡೆಗೆ ಕ್ಷಿಪ್ರ ನಿಗಾವಣೆ, ಪರೀಕ್ಷೆ, ಕುಷ್ಠ ರೋಗ, ಕ್ಷಯರೋಗ, ಉಪಶಮನ ಆರೈಕೆ, ಆಪ್ತಸಮಾಲೋಚನೆ ಕುರಿತು ಜಾಗೃತಿ ನೀಡಲಾಗುತ್ತಿದ್ದು, ಉತ್ಸವದಲ್ಲಿ ಹಾಗೂ ನಂತರ ಆಯ್ದ ಗ್ರಾಮಗಳಲ್ಲಿ ಮುಖಾಮುಖಿ, ಸಮನ್ವಯ, ಶೃತಿ ಸಂಸ್ಕೃತಿ ಕಲಾ ತಂಡಗಳಿಂದ ನೀಡುವ ಜಾಗೃತಿ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೋರಲಾಯಿತು.

ಇದೇ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಅಮೃತ್ ಹುಕ್ಕೇರಿ, ವೈದ್ಯಾಧಿಕಾರಿಗಳಾದ ಡಾ.ರಾಕೇಶ್ ಕುಮಾರ್, ಡಾ.ಸತೀಶ್, ಡಾ.ಶ್ವೇತಾಂಬರಿ, ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಶಿವಪ್ಪ, ಹಿರಿಯ ಹೆಚ್‌ಐಓ ಸುರೇಶ್, ಬಿಹೆಚ್‌ಇಓ, ಸರೋಜಾ ಕೆ, ನಾಗರಾಜ, ಬಾಲಪ್ಪ ನಾಯಕ, ಎಮ್‌ಟಿಎಸ್ ಸಚಿದ್ಯಾ ನಾಯಕ, ಪಿಹೆಚ್‌ಸಿಓ ಶಾರದಾ, ವನಿತಾ, ಮುಖಂಡರಾದ ಬಾಸ್ಕರ್ ರಾವ್, ಡಿಇಓ ಅಂಜು ವೆಂಕಟೇಶ್, ಆಶಾ ಕಾರ್ಯಕರ್ತೆಯರು ಮುಖಾಮುಖಿ ಕಲಾ ತಂಡದ ಕಲಾವಿದರು, ಸಾರ್ವಜನಿಕರು ಇದ್ದರು.

## ನೆಲಕ್ಕೆ ಅಪ್ಪಳಿಸಿದ ಜೆಟ್ ವಿಮಾನ: ಇಬ್ಬರಿಗೆ ಗಂಭೀರ ಗಾಯ




**ವಿಜಯಪುರ, ಫೆ. 9:** ಜಿಲ್ಲೆಯ ಬಬಲೇಶ್ವರ ತಾಲೂಕಿನ ಮಂಗಳೂರು ಗ್ರಾಮದ ಬಳಿ ಜೆಟ್ ವಿಮಾನವೊಂದು ಜಮೀನಿನಲ್ಲಿ ಬಿದ್ದು ಪತನಗೊಂಡಿದೆ.

ಕಲಬುರ್ಗಿಯಿಂದ ಬೆಳಗಾವಿಗೆ ತೆರಳುತ್ತಿದ್ದ ಜೆಟ್ ವಿಮಾನದಲ್ಲಿದ್ದ ತೈಲ ಖಾಲಿಯಾದ ಕಾರಣ ಜೆಟ್ ವಿಮಾನ ನೆಲಕ್ಕೆ ಅಪ್ಪಳಿಸಿದೆ. ಭಾನುವಾರ ಸಂಜೆ ಜೆಟ್ ವಿಮಾನ ಜಮೀನಲ್ಲಿ ಬಿದ್ದಿದೆ. ಇದು ಸೆಸ್ನಾ 172 ಟ್ಯಾಂಗೋ ಚಾರ್ಲಿ ಲಘು ವಿಮಾನವಾಗಿದ್ದು, ರೆಡ್ ಬರ್ಡ್ ಎವಿಯೇಷನ್ ಎಂಬ ವಿಮಾನ ತರಬೇತಿ ಸಂಸ್ಥೆ ಉಪಯೋಗಿಸುತ್ತಿದ್ದ ಜೆಟ್ ಪೈಲಟ್

ಕ್ಯಾಪ್ಟನ್ ಕುನಾಲ್ ಮಲ್ಹೋತ್ರಾ ಹಾಗೂ ತರಬೇತಿ ನಿರತ ಪೈಲಟ್ ಗೌತಮ್ ಶಂಕರ್ ಪಿ. ಆರ್. ಎಂಬಿಬ್ಬರು ಲಘು ವಿಮಾನದಲ್ಲಿ ಪ್ರಯಾಣಿಸುತ್ತಿದ್ದರು. ಸುದೈವ ವಶಾತ್ ಪೈಲೆಟ್ ಗಳಿಬ್ಬರಿಗೆ ಜೀವಕ್ಕೆ ಯಾವುದೇ ಹಾನಿಯಾಗಿಲ್ಲ. ಆದರೆ ತೀವ್ರವಾಗಿ ಗಾಯಗೊಂಡಿದ್ದಾರೆ.

ಸುದ್ದಿ ತಿಳಿದ ತಕ್ಷಣ ಬಬಲೇಶ್ವರ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಹಾರ ಕಾರ್ಯಗಳನ್ನು ಕೈಗೊಂಡು ಇಬ್ಬರು ಗಾಯಗೊಂಡ ಪೈಲೆಟ್ ಗಳನ್ನು ಆಸ್ಪತ್ರೆಗೆ ರವಾನಿಸಿದ್ದಾರೆ.

ತಾಂತ್ರಿಕ ದೋಷದಿಂದ ಜೆಟ್ ವಿಮಾನ ನೆಲಕ್ಕೆ ಅಪ್ಪಳಿಸಿದೆ ಎಂದು ಪೈಲೆಟ್ ಗಳು ತಿಳಿಸಿದ್ದಾರೆ.

ಬಬಲೇಶ್ವರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ

# ಇಂದು ಗಾರಿಗೆಜಾತ್ರ ಮಹೋತ್ಸವ ಕಾರ್ಯಕ್ರಮಕ್ಕೆ ನೀಲಗಲ್ ಮಠದ ಶ್ರೀಗಳಿಂದ ಚಾಲನೆ

ಧೈರ್ಯದ ದಾರಿ



**ಮಾನ್ವಿ,ಫೆ.9–**ಪಟ್ಟಣದ ಕಲ್ಮಠವತಿಯಿಂದ ಮಹಾಶಿವರಾತ್ರಿ ಅಂಗವಾಗಿ ಧ್ಯಾನ ಮಂದಿರದ ಆವರಣದಲ್ಲಿ ನಡೆಯುವ ಗಾರಿಗೆ ಜಾತ್ರ ಮಹೋತ್ಸವ ಕಾರ್ಯಕ್ರಮಕ್ಕೆ ಫೆ.10 ರಂದು ಬೆಳಿಗ್ಗೆ 8.30 ಕ್ಕೆ ಬೃಹನ್ಮಠ ನೀಲಗಲ್ ಶ್ರೀ ಡಾ.ಪಂಚಾಕ್ಷರಿ ಶಿವಾಚಾರ್ಯ ಮಹಾಸ್ವಾಮಿಗಳು ಧರ್ಮ ಧ್ವಜಾರೋಹಣ ನೆರವೇರಿಸುವ ಮೂಲಕ ಧಾರ್ಮಿಕ ಕಾರ್ಯಕ್ರಮಗಳನ್ನು ಉದ್ಘಾಟಿಸಲಿದ್ದಾರೆ. ಫೆ.10 ರಿಂದ 14 ರವರೆಗೆ ಪ್ರತಿದಿನ ಸಂಜೆ 6–30 ರಿಂದ ಪ್ರಭುಲಿಂಗ ಲೀಲೆ ಪ್ರವಚನವನ್ನು ಶ್ರೀ ರುದ್ರಯ್ಯಸ್ವಾಮಿ ಮದ್ಲಾಪುರ ನೀಡಲಿದ್ದಾರೆ. ಪ್ರತಿದಿನ ರಾತ್ರಿ 8ರಿಂದ ತಾಲೂಕಿನ ವಿವಿಧ ಶಾಲೆಗಳ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಫೆ.11 ರಂದು ದಿ.ಮಂಜುಳಾ ಸಂಗವೇಶ ಕಾಯಣ್ಣೋರ್ ಇವರ ಸ್ಮರಣಾರ್ಥ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ತಾಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ದತ್ತಿ ಬಹುಮಾನ ವಿತರಣ ಕಾರ್ಯಕ್ರಮ , ಫೆ.12 ರಂದು ಬೆಳಿಗ್ಗೆ 10–30 ರಿಂದ ಜಿಲ್ಲಾ ಮಟ್ಟದ ರೈತ ಸಮಾವೇಶ ಹಾಗೂ ಉಪನ್ಯಾಸ ಕಾರ್ಯಕ್ರಮ, ಕೃಷಿ ವಸ್ತು ಪ್ರದರ್ಶನ, ಪ್ರಗತಿ ಪರ ರೈತರಿಗೆ ಸನ್ಮಾನ, ಉಚಿತ ಆರೋಗ್ಯ ತಪಾಸಣ ಶಿಬಿರ ನಡೆಯಲಿದೆ ,ಫೆ.13 ರಂದು ಬೆಳಿಗ್ಗೆ 10–30 ರಿಂದ ಮಹಿಳಾ ದೇಶಿ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ. ಫೆ.14 ಸಂಜೆ 6–30 ರಿಂದ ಪ್ರಭುಲಿಂಗ ಲೀಲೆ ಪ್ರವಚನ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಬಳ್ಳಾರಿಯ ಚಿಂತಕರಾದ ಅನುರಾಧ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. 2024–25 ನೇ ಸಾಲಿನ ರಾಜ್ಯ ಮಟ್ಟದ ಸದ್ಗುರು ಶ್ರೀ ವಿರೂಪಾಕ್ಷೇಶ್ವರ ಕೃಪಾ ಭೂಷಣ ಪ್ರಶಸ್ತಿಯನ್ನು ಸಿಂಧನೂರಿನ ಕಾರುಣ್ಯಾಶ್ರಮವನ್ನು ಆಯ್ಕೆ ಮಾಡಲಾಗಿದ್ದು ಕಾರ್ಯಕ್ರಮದಲ್ಲಿ ನಗದು ಪುರಸ್ಕಾರ ಹಾಗೂ ಗೌರವಸ್ಮಾನ ನಡೆಸಲಾಗುವುದು. ಫೆ.15 ರಂದು ಮಹಾಶಿವರಾತ್ರಿ ಅಂಗವಾಗಿ ಬೆಳಿಗ್ಗೆ ಧ್ಯಾನ ಮಂದಿರದಲ್ಲಿನ ಕೋಟಿಲಿಂಗಗಳಿಗೆ ವಿಶೇಷ ಅಭಿಷೇಕ ಮಹಾಮಂಗಳಾರತಿ, ಬಿಲ್ವರ್ಚಾನೆ ವಿಶೇಷವಾಗಿ ಗಾರಿಗೆ ನೈವೆದ್ಯ ಸಮರ್ಪಿ ಸಲಾಗುತ್ತದೆ. ಬೆ.9–30ಕ್ಕೆ ಸಾಮೂಹಿಕ ವಿವಾಹಗಳು ನಡೆಯಲಿವೆ. ಸಂಜೆ 4.30 ರಿಂದ ಶ್ರೀ ಕಲ್ಮಠದಿಂದ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಲಿಂ.ಶ್ರೀ ಗುರು ವಿರೂಪಾಕ್ಷೇಶ್ವರ ಪಲ್ಲಕ್ಕಿ ಉತ್ಸವ ಧ್ಯಾನಮಂದಿರದ ವರೆಗೂ ನಡೆಯಲಿದೆ. ಸಂಜೆ 6–30ಕ್ಕೆ ಸುಮಂಗಲಿಯರಿಂದ ನಡೆಯುವ ರಥೋತ್ಸವಕ್ಕೆ ಲಿಂಗಸೂಗುರು ತಹಶೀಲ್ದಾರ್ ಸತ್ಯಮ್ಮ ಗಿಣಿವಾರ ರವರು ಚಾಲನೆ ನೀಡಲಿದ್ದಾರೆ. ಸಂಜೆ 7–30ರಿಂದ ಜಿಲ್ಲಾ ಮಟ್ಟದ ನೃತ್ಯ ಸ್ಪರ್ಧೆ ನಾಟ್ಯ ವೈಭವ ಕಾರ್ಯಕ್ರಮದಲ್ಲಿ ಜಿಲ್ಲೆಯ ಪ್ರತಿಭವಂತ ನಾಟ್ಯ ಕಲಾವಿದರಿಂದ ನೃತ್ಯ ಪ್ರದರ್ಶನ ನಡೆಯಲಿದೆ ಗಬ್ಬೂರಿನ ಹಾಸ್ಯ ಕಲಾವಿದ ದೇವರಾಜ ಎಲಿ ಯವರಿಂದ ಹಾಸ್ಯ ಕಾರ್ಯಕ್ರಮ ನಡೆಯಲಿದ್ದು ಕಾರ್ಯಕ್ರಮದಲ್ಲಿ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತ್ರಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು .ಶಾಸಕ ಹಂಪಯ್ಯನಾಯಕ. ಸಿಂಧನೂರು ಶಾಸಕ ಹಂಪನಗೌಡ ಬಾದ ರ್ಲಿ, ರಾಯಚೂರು ಶಾಸಕ ಶಿವರಾಜ್ ಪಾಟೀಲ್, ಮಾಜಿ ಸಂಸದ ಬಿ.ವಿ.ನಾಯಕ, ಮಾಜಿ ಶಾಸಕರಾದ ಬಸನವಗೌಡ ಬ್ಯಾಗವಾಟ , ಗಂಗಾಧರ ನಾಯಕ. ವಿಧನಪರೀಷತ್ ಸದಸ್ಯರಾದ ಬಸವಗೌಡ ಬಾದರ್ಲಿ, ಎ.ವಸಂತಕುಮಾರ ಸೇರಿದಂತೆ ನಾಡಿನ ವಿವಿಧ ಮಠಗಳ ಸ್ವಾಮಿಗಳು ,ಸಾಧಕರು,ಗಣ್ಯರು,ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ಕಲ್ಮಠ ಶ್ರೀ ವಿರೂಪಾಕ್ಷ ಪ<ಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ

## ಮಾನವಿ: 2ನೇ ಮನೆ "ಮಕ್ಕಳೊಂದಿಗೆ ಓದು" ಕಾರ್ಯಾಗಾರ

# ಮನೆಯಲ್ಲಿ ರೊಕ್ಕ ಇಲ್ಲದಿದ್ದರೂ ಬುಕ್ಕ ಇರಲಿ: ವಿರೇಶ ಹುಲುಗುಂಚಿ

ಧೈರ್ಯದ ದಾರಿ

**ಮಾನ್ವಿ,ಫೆ.9–** ಮಕ್ಕಳು ಮತ್ತು ಪಾಲಕರೊಂದಿಗೆ ಶಿಕ್ಷಕರ ಜೊತೆ ಮನೆಯಲ್ಲಿಯೇ ಕುಳಿತು ಮಕ್ಕಳ ಓದು – ಕಲಿಕೆ ಬಗ್ಗೆ ಮುಕ್ತವಾಗಿ ಸಂಭಾಷಣೆ ಮಾಡುವುದರಿಂದ ಮಕ್ಕಳಲ್ಲಿ ಕಲಿಕೆ ಆಸಕ್ತಿ ಮತ್ತು ಪಾಲಕರ ಜವಾಬ್ದಾರಿ ಕೂಡ ಹೆಚ್ಚಿಸುತ್ತದೆ. ಓದುವ ಹವ್ಯಾಸ ಜ್ಞಾನವನ್ನು ವೃದ್ಧಿಸುತ್ತದೆ. ಮನೆಯಲ್ಲಿ ಹಣ ಇಲ್ಲದಿದ್ದರೂ ಪುಸ್ತಕಗಳು ಇರಬೇಕು ಎಂದು ಪ್ರಗತಿಪರ ಚಿಂತಕ ಹಾಗೂ ಶಿಕ್ಷಣ ಪ್ರೇಮಿ ವಿರೇಶ ಹುಲಿಗುಂಚಿ ಅಭಿಮತ ವ್ಯಕ್ತಪಡಿಸಿದರು.

ಮಾನವಿ ಪಟ್ಟಣದ ಸುಜಾತ – ಯಮುನಪ್ಪ ಜಾಗೀರಪನ್ನೂರು ಇವರ ಮನೆಯಲ್ಲಿ ಜನತಾ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್(ರಿ) ಬಲ್ಲಟಗಿ ವತಿಯಿಂದ ಭಾನುವಾರ ಆಯೋಜಿಸಿದ್ದ, 2ನೇ ಮನೆ "ಮಕ್ಕಳೊಂದಿಗೆ ಓದು" ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಮಾನವಿ ಕೋನಾಪುರಪೇಟೆ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಶಿಕ್ಷಕಿ ಸ್ಫೂರ್ತಿ ಸುರೇಶ ಮಾತನಾಡಿ ಮಕ್ಕಳು ಸರಳವಾದದ್ದು ಬೇಗ ಕಲಿಯುತ್ತಾರೆ, ಕಠಿಣ ವಿಷಯಗಳನ್ನು ನಿರ್ಲಕ್ಷ ಮಾಡುತ್ತಾರೆ. ಮಕ್ಕಳು ಹೇಳಿದ್ದನ್ನು ಕಲಿಯುವುದಕ್ಕಿಂತ ನೋಡಿ ಕಲಿಯುತ್ತಾರೆ. ಮಕ್ಕಳ ಮೊದಲ ಪಾಠಶಾಲೆ ಮನೆಯಾಗಿದೆ. ಮೊದಲ ಗುರು



ತಾಯಿಯಾಗಿದ್ದಾರೆ ಪಾಲಕರು ಮಕ್ಕಳೊಂದಿಗೆ ಸ್ನೇಹಿತರಾಗಿ ಇರಬೇಕು ಎಂದರು.ನಟ್ರಸ್ಟ್ ಅಧ್ಯಕ್ಷ ಜೆ.ಶರಣಪ್ಪ ಬಲ್ಲಟಗಿ ಮೊದಲ ಮಾತು, ಮುಖ್ಯಗುರು ಶಿವಕೇಶವ ಕುಮಾರ್, ಹೋರಾಟಗಾರ ಲಕ್ಷ್ಮಣ ಜಾನೇಕಲ್ ಮಾತನಾಡಿದರು.

ಈ ಸಂದರ್ಭದಲ್ಲಿ ಬಹುಜನ ಸಂಘರ್ಷ ಸಮಿತಿ ಮಾನವಿ ತಾಲೂಕಾಧ್ಯಕ್ಷ ಯಮುನಪ್ಪ ಜಾಗೀರಪನ್ನೂರು, ಸುರೇಶ್ ಪಾತಿಮ ನಗರ ಮಾನ್ವಿ, ಲಲಿತಮ್ಮ, ಕೃಪಾವತಿ ನಾಗರಾಜ್, ವಿದ್ಯಾರ್ಥಿಗಳು ಪಿ. ವಿಶಾಲ್, ನಿಖಿಲ್, ನಿಕಿತಾ, ಅಶ್ವಿನಿ, ಅಭಯ್, ಭಾಗವಹಿಸಿದ್ಧರು.

# ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಎಸಿ ಡಾ.ಹಂಪಣ್ಣ ಸಜ್ಜನ್

ಧೈರ್ಯದ ದಾರಿ

**ರಾಯಚೂರು ಫೆ,9:** ಜಿಲ್ಲಾಡಳಿತದಿಂದ ಜಿಲ್ಲಾ ಕೇಂದ್ರದಲ್ಲಿ ಫೆ.19ರ ಗುರುವಾರ ದಂದು ಆಚರಿಸಲಾಗುವ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಫೆ.09ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ತಾಲೂಕು ಸರ್ಕಾರಿ ಕಚೇರಿಗಳು, ಗ್ರಾಮ ಪಂಚಾಯಿತಿಗಳಲ್ಲಿ, ಶಾಲಾ-ಕಾಲೇಜುಗಳು ಹಾಗೂ ವಸತಿ ನಿಲಯಗಳಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಕಡ್ಡಾಯವಾಗಿ ಆಚರಣೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ಸಂಬಂಧಿಸಿದ ಅಧಿಕಾರಿಗಳು ನಾನಾ ಕಾರ್ಯಸಿದ್ಧತೆಗೆ ಅಗತ್ಯ ಕ್ರಮ ವಹಿಸಬೇಕು. ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂದು ಜಿಲ್ಲಾ ಕೇಂದ್ರದಲ್ಲಿ ಬೆಳಗ್ಗೆ 09 ಗಂಟೆಗೆ ನಗರದ



ಕಸಭಾವಿ ಹತ್ತಿರದ ಛತ್ರಪತಿ ಶಿವಾಜಿ ಮಹಾರಾಜರ ವೃತ್ತದಿಂದ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಬೆಳಗ್ಗೆ 11 ಗಂಟೆಗೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಮೆರವಣಿಗೆ ಸಾಗುವ ಮಾರ್ಗ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆಯನ್ನು ಮಹಾನಗರ ಪಾಲಿಕೆಯಿಂದ ಕಲ್ಪಿಸಬೇಕು ಎಂದರು.

ಜಯಂತಿ ಕಾರ್ಯಕ್ರಮದ ವೇದಿಕೆ ಅಲಂಕಾರ, ಗಣ್ಯರಿಗೆ ಪುಸ್ತಕ ವಿತರಣೆ, ಪೂಜೆಗೆ ಹೂವು-ಹಾರಗಳ ವ್ಯವಸ್ಥೆ ಮಾಡಬೇಕು. ಪೊಲೀಸ್ ಇಲಾಖೆಯಿಂದ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸೂಕ್ತ ಬಂದೋಬಸ್ತ್ ಒದಗಿಸಬೇಕು. ಶಿಷ್ಠಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರ ಆಹ್ವಾನಕ್ಕೆ ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವೇದಿಕೆ ಕಾರ್ಯಕ್ರಮದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಅವರ ಕುರಿತು ಉಪನ್ಯಾಸ ನೀಡಲು ಉತ್ತಮ ಅಭ್ಯರ್ಥಿಗಳಿಗೆ ಆಹ್ವಾನಿಸಲು ನಿರ್ಣಯಿಸಲಾಯಿತು.


ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಎಲ್ಲರೂ ಅನುಕೂಲ ಮಾಡಿಕೊಡಬೇಕು ಎಂದು ಅರಾಯಚೂರು ಸಹಾಯಕ ಆಯುಕ್ತರು ಸಮಾಜದ ಮುಖಂಡರಲ್ಲಿ ಕೋರಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದ್ದೀಶ್, ಮರಾಠ ಸಮಾಜದ ಅಧ್ಯಕ್ಷರಾದ ಹನುಮಂತ್ ಜಗತ್ತಪ್, ರಾಯಚೂರು ಕ್ಷತ್ರಿಯ ಒಕ್ಕೂಟದ ಅಧ್ಯಕ್ಷರು ಅಶೋಕ್ ಕುಮಾರ್ ಮೈದರ್ಕರ್, ಮುಖಂಡರಾದ ಶ್ರೀನಿವಾಸ್ ಪತಂಗೆ, ಭೀಮಣ್ಣ ಜಾಧವ, ಅಂಬಾಜಿ ರಾವು ಮೈದರ್ಕರ್, ಸೂರ್ಯ ರಾವು, ರಘು ನನ್ನೂರೆ, ಅಮಿತ್ ಜಗಟಪ್, ಸತೀಶ್ ಜಗಟಪ್, ಅಮರೇಶ್, ಸಿದ್ದು, ಶರಣು, ಶಿವರಾಮ್ ಸಿಂಗ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಸಭೆಯಲ್ಲಿ ಇದ್ದರು.

# ಮಾಹಿತಿ ಆಗರ ಕೃಷಿ ಮೇಳದಲ್ಲೂ ಜನವೋ ಜನ, ರಾಯಚೂರು ಜಿಲ್ಲಾ ಉತ್ಸವ ಅಕ್ಷರಶಃ ಜನೋತ್ಸವ







ಧೈರ್ಯದ ದಾರಿ

**ರಾಯಚೂರು ಫೆ,9:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಫೆ.5 ರಿಂದ ಫೆ.7ರವರೆಗೆ ಮೂರು ದಿನಗಳ ಕಾಲ ನಡೆದ ರಾಯಚೂರು ಜಿಲ್ಲಾ ಉತ್ಸವ ಜನೋತ್ಸವವಾಗಿ ಇತಿಹಾಸದ ಪುಟ ಸೇರಿತು.

ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಫೆ.5 ರಿಂದ 7ರವರೆಗೆ ಮೂರು ದಿನಗಳ ಕಾಲ ನಡೆದ ಕೃಷಿ ಮೇಳದಲ್ಲೂ ಜನವೋ ಜನ ಎನ್ನುವ ಸಂದೇಶ ರವಾನೆಯಾಯಿತು.

ರಾಯಚೂರು ಉತ್ಸವಕ್ಕಾಗಿ ಕೃಷಿ ವಿಶ್ವ ವಿದ್ಯಾಲಯ ಆವರಣವು ಹಬ್ಬದಂತೆ ಸಿದ್ಧಗೊಂಡು ಎಲ್ಲೆಡೆ ಉತ್ಸವದ ಫಲಕಗಳೇ ಕಾಣಿಸಿದವು.

ಭತ್ತದ ಒಣಮೇವಿನಿಂದ ನಿರ್ಮಿಸಿದ್ದ ಕೃಷಿ ಮೇಳದ ಕಮಾನು ವಿಶೇಷ ಆಕರ್ಷಣೆಯಾಗಿತ್ತು. ಉತ್ಸವಕ್ಕೆ ಆಗಮಿಸಿದ್ದ ಬಹುತೇಕ ಜನತೆ ಕೃಷಿ ಮೇಳದ ಕಮಾನಿನ ಮುಂದೆ ನಿಂತು ಸೆಲ್ಫಿ ಪಡೆಯುತ್ತಿದ್ದುದು ಕಂಡು ಬಂದಿತು.

ಜರ್ಮನ್ ಟೆಂಟ್‌ನಲ್ಲಿ ಸಿದ್ಧಪಡಿಸಿದ ಆಹಾರ ಮೇಳದ ಮಳಿಗೆ ರಾಯಚೂರು ಉತ್ಸವ ಮತ್ತು ಕೃಷಿ ಮೇಳದ ವಿಶೇಷ ಆಕರ್ಷಣೆ ಆಗಿತ್ತು. ಇಲ್ಲಿ 100ಕ್ಕೂ ಹೆಚ್ಚು ಆಹಾರ ಮಳಿಗೆಗಳು ಇದ್ದವು. ಉತ್ಸವದ ನಿಮಿತ್ತ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಅಂಗಳದಲ್ಲಿ ಇರಿವೆಗಳು ಹರಿದಾಡಿದಂತೆ ಜನರ ದಂಡೇ ಸೇರಿತ್ತು.

ಉತ್ಸವದ ನಿಮಿತ್ತ ವಿವಿಧ ಇಲಾಖೆಗಳು ತೆರೆದಿದ ಮತ್ತು ಕೃಷಿ ವಿಶ್ವವಿದ್ಯಾಲಯದ ಕೃಷಿ ಮೇಳದ ನಾನಾ ಮಳಿಗೆಗಳ ಮುಂದೇ ಜನದಟ್ಟಣೆ ಕಾಣಿಸಿತು.

ಉತ್ಸವದಲ್ಲಿ ಲಕ್ಷಾಂತರ ಸಂಖ್ಯೆಯಲ್ಲಿ ಜನರು ಸೇರಿ ರಾಯಚೂರು ಉತ್ಸವ ಮತ್ತು ಕೃಷಿ ಮೇಳದ ಎರಡೂ ಕಾರ್ಯಕ್ರಮದಲ್ಲಿ ಉತ್ಸಾಹದಿಂದ ಭಾಗಿಯಾದರು.

ತಿಂಡಿ ತಿನಿಸುಗಳು, ಬಟ್ಟೆ ಅಂಗಡಿ ಸೇರಿದಂತೆ ಅನೇಕ ಬಗೆಯ ಅಂಗಡಿಗಳ ಮುಂದೆಯೂ ಜನರು ಸೇರಿ ತಮಗೆ ಬೇಕಾದ ವಸ್ತುಗಳನ್ನು ತಿಂಡಿಗಳನ್ನು ಖರೀದಿಸಿ ಸಂಭ್ರಮಿಸಿದರು.

ಕೃಷಿ ವಿವಿಯ ಕೃಷಿ ಮೇಳದ ಆವರಣದಲ್ಲಿ ಪಂಚ ಗ್ಯಾರಂಟಿ ಯೋಜನೆಗಳಾದ ಯುವನಿಧಿ, ಶಕ್ತಿ ಯೋಜನೆ, ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಆಯುಷ್ಯ ಇಲಾಖೆಯಿಂದ ಆಯುರ್ವೇದ ಆರೋಗ್ಯ ಸೌಲಭ್ಯಗಳ ಕುರಿತು ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪೂರ್ಣಿಮಾ ಆಯುರ್ವೇದ ಮಹಾವಿದ್ಯಾಲಯದ, ಬಸವ ಅಕ್ಕ ಅಕಾಡೆಮಿ ಹಾಗೂ ರಾಯಚೂರು ರಸಾಯನಿಕ ತಯಾರಕರ ಸಂಘದಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರಗಳು ನಡೆದವು.

ರಾಯಚೂರಿನ ಅಂಚೆ ವಿಭಾಗದಿಂದ ಒಂದು ಸೂರು-ಹಲವು ಯೋಜನೆಗಳ ಕುರಿತು ಅರ್ಹ ಫಲಾನುಭಗಳಿಗೆ ಜಾಗೃತಿ ಮೂಡಿಸಲಾಯಿತು. ರಾಯಚೂರು ಅಕ್ಕಿ ಮಾಲೀಕರ ಸಂಘದಿಂದ ವಿವಿಧ ತಳಿಯ ಅಕ್ಕಿಗಳ ಪ್ರದರ್ಶನ ನಡೆಯಿತು.

ರಾಯಚೂರು ನಗರದ ಸೆಲ್ಕೋ ಫೌಂಡೇಶನ್ ವತಿಯಿಂದ ಸೌರ ಬೆಂಬಲಿತ ಜೀವನೋಪಾಯ ಪರಿಹಾರ ಪ್ರದರ್ಶನ ಹಾಗೂ ರೈತರಿಗೆ ಉತ್ತಮ ಗುಣಮಟ್ಟದ ಬೀಜಗಳ ಕುರಿತು ರಾಷ್ಟ್ರೀಯ ಬೀಜ ನಿಗಮ, ಕರ್ನಾಟಕ ರಾಜ್ಯ ಮತ್ತು ಸಾವಯವ ಪ್ರಮಾಣ ಸಂಸ್ಥೆಯಿಂದ ಜಾಗೃತಿ ಮೂಡಿಸಲಾಯಿತು.

ಖಾದಿ ವಸ್ತು ಪ್ರದರ್ಶನ ಹಾಗೂ ಮಾರಾಟ, ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಜವಳಿ ವಸ್ತು ಪ್ರದರ್ಶನ ಹಾಗೂ ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಹಾಲು ಉತ್ಪಾದಕರ ಸಂಘಗಳಿಂದ ನಂದಿನಿ ಉತ್ಪಾದನೆಗಳಾದ ಹಾಲು, ಮೊಸರು, ಮೈಸೂರ್ ಪಾಕ್, ಹಾಲಿನ ಪೇಡ, ಹಾಲಿನ ಕೇಸರ್, ಬೆಲ್ಲದ ಓಟ್ಸ್ ಮತ್ತು ನಟ್ಸ್ ಬರ್ಫಿ, ಗುಡ್ ಲೈಫ್ ಉತ್ಪಾದನೆಗಳ ಪರಿಚಯುವನ್ನು ಸಾರ್ವಜನಿಕರಿಗೆ ಮಾಡಲಾಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಮಾದರಿ ಅಂಗನವಾಡಿ ಕೇಂದ್ರ ಮತ್ತು ಪೌಷ್ಟಿಕ ಆಹಾರದ ಪ್ರದರ್ಶನ, ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮಗಳ ಕುರಿತು ಜಾಗೃತಿ ಮೂಡಿಸಲಾಯಿತು.

ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ ಜಲಸಮೃದ್ಧ ಕರ್ನಾಟಕದೆಡೆಗೆ ನಮ್ಮ ನಡಿಗೆ, ಜಲಮೂಲಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆ ಹಾಗೂ ಅಂತರ್ಜಾಲ ವೃದ್ಧಿಗೆ ಕ್ರಾಂತಿಕಾರಿ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ಅಲ್ಲದೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ಜವಾಹರಲಾಲ್ ನೆಹರು ತಾರಾಲಯದ ಯೋಜನೆ ಹಾಗೂ ಕಾರ್ಯಕ್ರಮಗಳು ಹಾಗೂ ಸಂಜೆ ಆಕಾಶ ವೀಕ್ಷಣೆ ಕಾರ್ಯಕ್ರಮ ಮತ್ತು ಸಂಚಾರಿ ತಾರಾಲಯದಿಂದ ಆಕಾಶ ಕಾಯಗಳನ್ನು ತೋರಿಸಲಾಯಿತು.

ಕೃಷಿ ಇಲಾಖೆಯಿಂದ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ-2.0ರ ಕಾರ್ಯಕ್ರಮದ ಕುರಿತು ಜಾಗೃತಿ ಮೂಡಿಸಲಾಯಿತು.

ಕಣ್ಮನ ತಣಿಸಿದ ಆಹಾರ ಮಳಿಗೆಗಳು: ಆಹಾರ ಮೇಳದ ಮಳಿಗೆಗಳಲ್ಲಿ ಉತ್ಸವದ ಮೂರು ದಿನಗಳ ಕಾಲ ಮಕ್ಕಳು, ಯುವಕರು, ಯುವತಿಯರು ವಿವಿಧ ಬಗ್ಗೆಯ ತಿಂಡಿ ತಿನಿಸುಗಳನ್ನು ಖರೀದಿಸಿ ಸೇವಿಸಿ ಸಂಭ್ರಮಿಸಿದರು.

ಆಹಾರ ಮೇಳದಲ್ಲಿ ಚಿಕ್ಕಮಗಳೂರು, ಗದಗ, ಮೈಸೂರು, ಬಾಗಲಕೋಟೆ, ಬೆಳಗಾವಿ, ಕಲಬುರಗಿ ಸೇರಿದಂತೆ 12 ಜಿಲ್ಲೆಗಳಿಂದ ಆಗಮಿಸಿದ್ದ ಹಲವು ಬಗೆಯ ತಿಂಡಿ, ಖಾದ್ಯಗಳ ತಯಾರಕರು ತಮ್ಮ ತಮ್ಮ ಮಳಿಗೆಯಲ್ಲಿ ತಾವು ತಯಾರಿಸಿದ ತಿಂಡಿ ತಿನಿಸುಗಳ ಬಗ್ಗೆ ಪರಿಚಯಿಸಿದರು.

ಉತ್ಸವ ಆರಂಭಗೊಂಡ ಮೊದಲ ದಿನದಿಂದ ಮೂರನೇ ದಿನದ ವರೆಗೂ ಆಹಾರ ಮೇಳಕ್ಕೆ ಭಾರಿ ಸಂಖ್ಯೆಯಲ್ಲಿ ಜನರು ಹರಿದು ಬಂದಿದ್ದು ಕಂಡು ಬಂದಿತು.

ಹಲವು ಶಾಲೆಗಳ ಮಕ್ಕಳು ಕೂಡ ಉತ್ಸವದ ಸವಿ ಸವಿಯಲು ಶಾಲಾ ಶಿಕ್ಷಕರುಗಳೊಂದಿಗೆ ಆಹಾರ ಮೇಳಕ್ಕೂ ಭೇಟಿ ನೀಡಿ ತಮಗಿಷ್ಟ ಬಂದ ತಿಂಡಿ ತಿನಿಸುಗಳನ್ನು ತಿಂದು ಸಂಭ್ರಮಿಸಿದರು.

ರಾಯಚೂರಿನ ಕೆನರಾ ಬ್ಯಾಂಕ್, ಎಸ್.ಬಿ.ಐ ಸೇರಿದಂತೆ ಇತರೆ ಬ್ಯಾಂಕುಗಳಿಂದ ದೊರೆಯುವ ಸೌಲಭ್ಯಗಳು ಹಾಗೂ ವಿವಿಧ ಸರ್ಕಾರಿ ಸೌಲಭ್ಯಗಳ ಜನರಿಗೆ ಮಾಹಿತಿ ನೀಡಲಾಯಿತು.

## 12 ವರ್ಷದ ಕೆಳಗಿನ ಮಕ್ಕಳಿಗೂ ಹೃದಯ ಸಂಬಂಧಿ ಚಿಕಿತ್ಸೆ ನೀಡುತ್ತಿರುವ ಗುದಗೆ ಆಸ್ಪತ್ರೆಯ ಕಾರ್ಯ ಸ್ತುತ್ಯಾರ್ಹ: ಡಾ.ಗೋವಿಂದ ಔರಾದ್ಕರ್

**ಬೀದರ್: ಫೆ9:**12 ವರ್ಷದ ಕೆಳಗಿನ ಮಕ್ಕಳಿಗೂ ಹೃದಯ ಸಂಬಂಧಿ ಕಾಯಿಲೆ ಕಾಣಿಸಿಕೊಳ್ಳುವುದು ಸಾಮಾನ್ಯ. ಅದಕ್ಕೆ ನುರಿತ ಹಾಗೂ ಪರಿಣಾಮಕಾರಿ ಚಿಕಿತ್ಸೆ ನೀಡುತ್ತಿರುವ ಗುದಗೆ ಆಸ್ಪತ್ರೆಯ ಕಾರ್ಯ ಸ್ತುತ್ಯಾರ್ಹ ಎಂದು ಬೆಂಗಳೂರಿನ ಜಯದೇವ ಆಸ್ಪತ್ರೆಯ ಮಕ್ಕಳ ಹೃದಯರೋಗ ತಜ್ಞರಾದ ಡಾ. ಗೋವಿಂದ ಔರಾದ್ ಕರ್ ತಿಳಿಸಿದರು.ಭಾನುವಾರ ನಗರದ ಗುದಗೆ ಸೂಪರ್ ಸ್ಪೆಶಾಲಿಟಿ ಹಾಗೂ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ರೋಟರಿ ಕ್ಲಬ್ ಆಫ್ ಬೀದರ್ ಮೇನ್ ಸಂಸ್ಥೆಯ ಸಹಯೋಗದಲ್ಲಿ ಜಿಲ್ಲೆಯ 12 ವರ್ಷದ ಕೆಳಗಿನ ಮಕ್ಕಳಿಗೆ ಹೃದಯ ಸಂಬಂಧಿ ಕಾಯಿಲೆ ತಪಾಸಣೆ ಹಾಗೂ ಉಚಿತ ಚಿಕಿತ್ಸಾ ಶಿಬಿರ ಉದ್ದೇಶಿಸಿ ಮಾತನಾಡಿರುವ ಅವರು, ಮಕ್ಕಳು ತಾಯಿಯ ಗರ್ಭದಲ್ಲಿದ್ದಾಗಲೇ ಅವರಿಗೆ ಹೃದಯ ಸಂಬಂಧಿ ಕಾಯಿಲೆ ಕಾಣಿಸಿಕೊಳ್ಳುತ್ತದೆ. ಅದಕ್ಕೆ ಮಗು ಹುಟ್ಟಿದಾಗಲೆ ಚಿಕಿತ್ಸೆ ನೀಡಿದರೆ ಮಗು ಇಡೀ ಜೀವನ ಪರ್ಯಂತರ ಆರೋಗ್ಯವಾಗಿರುವುದು. ಆದರೆ ಬಾಲ್ಯದಲ್ಲಿ ಅದಕ್ಕೆ ಚಿಕಿತ್ಸೆ ನೀಡದಿದ್ದರೆ ಸಾವಿಗೆ ಕಾರಣವಾಗುವ ಸಂಭವವಿರುತ್ತದೆ. ದೊಡ್ಡವರಿಗೆ ಹೋಲಿಸಿದರೆ ಹೃದಯ ಸಂಬಂಧಿ ಕಾಯಿದೆಯಿಂದ ಮಕ್ಕಳ ಸಾವು ನೋವಿನ ಪ್ರಮಾಣ ಕಡಿಮೆ ಇರುತ್ತದೆ ಎಂಬುದು ಸಮಾಧಾನದ ಮಾತು ಎಂದರು.

ಆಸ್ಪತ್ರೆಯ ಹೃದಯರೋಗ ತಜ್ಞರಾದ ಡಾ.ನಿತೀನ ಗುದಗೆ ಅವರು ಮಾತನಾಡಿ, ಕಳೆದ ಎಳೆಂಟು ದಿನಗಳಿಂದ ಜಿಲ್ಲೆಯಾದ್ಯಂತ 12 ವರ್ಷದ ಕೆಳಗಿರುವ ಹೃದಯ ಸಂಬಂಧಿ ಕಾಯಿಲೆಯುಳ್ಳ ಮಕ್ಕಳನ್ನು ಪತ್ತೆ ಹಚ್ಚಿ ತಪಾಸಣೆ ಮಾಡಿ ಅಂತಹ ಮಕ್ಕಳಿಗೆ ಚಿಕಿತ್ಸೆ ನೀಡಲಾಗಿದೆ. ಈ ಹಿಂದೆಯೂ ಸಹ ಬಹಳಷ್ಟು ಮಕ್ಕಳಿಗೆ ಆರೋಗ್ಯ ಉಚಿತ ತಪಾಸಣೆ ಮಾಡಿ ಚಿಕಿತ್ಸೆ ನೀಡಲಾಗಿದೆ ಎಂದವರು ಹೇಳಿದರು.ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ನಿವೃತ್ತ ಜಿಲ್ಲಾ ಶಸ್ತ್ರ ಚಿಕಿತ್ಸೆಕರಾದ ಡಾ ಚಂದ್ರಕಾಂತ ಗುದಗೆ ಈ ಸಂದರ್ಭದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳ ಮನಸ್ಸು ಹೂವಿನಂತಿರುತ್ತದೆ. ಅವರ ಆರೋಗ್ಯ ಕಾಪಾಡುವುದು ಪಾಲಕರಾದಿಯಾಗಿ ಜಿಲ್ಲೆಯ ಜವಾಬ್ದಾರ ವೈದ್ಯರ ಕರ್ತವ್ಯವು ಹೌದು. ಹಾಗಾಗಿ ಮಕ್ಕಳ ಆರೋಗ್ಯ ಬಗ್ಗೆ ಕಾಳಜಿ ವಹಿಸುವುದು ಅಗತ್ಯ. ಈ ನಿಟ್ಟಿನಲ್ಲಿ ನಮ್ಮ ಆಸ್ಪತ್ರೆಯೂ ಎಲ್ಲಾ ವಯಸ್ಸಿನ ರೋಗಿಗಳಿಗೆ ದಿನದ 24 ಗಂಟೆಗಳ ಕಾಲ ಚಿಕಿತ್ಸೆ ನೀಡಲು ಲಭ್ಯವಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ರೋಟ್ರಿ ಕ್ಲಬ್ ಆಫ್ ಬೀದರ್ ಮೇನ್ ನ ಕಲ್ಯಾಣ ಜೋನ್ ಸಹಾಯಕ ಗವರ್ನರ್ ಹಾವಶೆಟ್ಟಿ ಪಾಟೀಲ ಮಾತನಾಡಿ, ಗುದಗೆ ಆಸ್ಪತ್ರೆಯ ಕಾರ್ಯ ನಿಜಕ್ಕೂ ಮೆಚ್ಚುವಂಥದ್ದು. ಕಡಿಮೆ ಖರ್ಚಿನಲ್ಲಿ ದಿನದ 24 ಗಂಟೆಗಳ ಕಾಲ ಸೇವೆ ನೀಡುತ್ತಿರುವುದು ಪ್ರಶಂಸನ ೀರ್ಹ ಕ್ರಮ. ರೋಟ್ರಿ ಕ್ಲಬ್ ನ ಮನವಿಯನ್ನು ಮನ್ನಿಸಿ 12 ವರ್ಷದೊಳಗಿರುವ ಮಕ್ಕಳಿಗೆ ಹೃದಯ ಸಂಬಂಧಿ ಕಾಯಿಲೆಗೆ ಉಚಿತ ಚಿಕಿತ್ಸೆ ನೀಡುತ್ತಿದ್ದಾರೆ ಎಂದವರು ಹೇಳಿದರು. ಆಸ್ಪತ್ರೆಯ ಇನ್ನೋರ್ವ ಹಿರಿಯ ವೈದ್ಯರಾದ ಡಾ ಸಚಿನ್ ಗುದಗೆ ಮಾತನಾಡಿ, ಡಾ ಗೋವಿಂದ ಔರಾದ್ಕರ್ ಅವರು ನಮ್ಮ ಆಸ್ಪತ್ರೆಗೆ ಸೇವೆ ನೀಡಲು ಮುಂದಾಗಿದ್ದು ಬಹಳ ಸಂತೋಷ. ಅವರ ಸೇವೆ ನಾವಿನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬ ಹುದಾಗಿದೆ. ಈ ನಿಟ್ಟಿನಲ್ಲಿ ಇಂದು 12 ವರ್ಷದ ಕೆಳಗಿನ ಮಕ್ಕಳಿಗೆ ನಮ್ಮ ಆಸ್ಪತ್ರೆಯಲ್ಲಿ ಹೃದಯ



ಸಂಬಂಧಿ ತಪಾಸಣೆ ಹಾಗೂ ಚಿಕಿತ್ಸೆಗೆ ವಿಶೇಷ ಶಿಬಿರ ಹಮ್ಮಿಕೊಂಡಿದ್ದು ಇಂದು ಸಂಜೆ ವರೆಗೆ ಜಿಲ್ಲೆಯ ಸಾರ್ವಜನಿಕರು ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದರು.ಜಿಲ್ಲೆಯ ಹಿರಿಯ ವೈದ್ಯರಾದ ಡಾ ವಿ ವಿ ನಾಗರಾಜ, ಡಾ. ವಿಜಯಕುಮಾರ ಕೋಟೆ, ಡಾ.ಮಹೇಶ ತೊಂಡಾರೆ ಸೇರಿದಂತೆ ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿಗಳು, ಸಿಬ್ಬಂದಿ ಹಾಗೂ ರೋಟರಿ ಕ್ಲಬ್ ನ ಇತರೆ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

# ಬಿಜೆಪಿಯವರು ರಾಜ್ಯ ಸರ್ಕಾರ ದಿವಾಳಿಯಾಗಿದೆಯೆಂದು ಅಪಪ್ರಚಾರ ಮಾಡುತ್ತಾರೆ : ರಾಮಲಿಂಗಾರೆಡ್ಡಿ ಕಿಡಿ

**ಬೆಂಗಳೂರು, ಫೆ.9–** ಬೆಂಗಳೂರು ಮೆಟ್ರೊ ವಿಷಯದಲ್ಲಿ ಒಳ್ಳೆಯದಾದರೆ ಬಿಜೆಪಿಯವರು ಅದನ್ನು ಪ್ರಧಾನಿ ನರೇಂದ್ರ ಮೋದಿ ಮಾಡಿದ್ದು ಎನ್ನುತ್ತಾರೆ. ದರ ಏರಿಕೆಯಾದಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಹೊಣೆ, ರಾಜ್ಯ ಸರ್ಕಾರ ದಿವಾಳಿಯಾಗಿದೆಯೆಂದರು ನಿರಂತರವಾದ ಅಪಪ್ರಚಾರ ಮಾಡುತ್ತಾರೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಕಿಡಿಕಾರಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ಎಲ್ಲಾ ಮೇಟ್ರೊಗಳ ನಿರ್ವಹಣೆಗೆ ರಚಿಸಲಾಗಿರುವ ಸಮಿತಿಗೆ ಕೇಂದ್ರ ನಗರಾಭಿವೃದ್ಧಿ ಕಾರ್ಯದರ್ಶಿಯೇ ಅಧ್ಯಕ್ಷರಿದ್ದಾರೆ. ಬೆಂಗಳೂರು ಮೇಟ್ರೊ ಪ್ರಯಾಣದ ದರ ಪರಿಷ್ಕರಣಾ ಸಮಿತಿಗೆ ನ್ಯಾಯಮೂರ್ತಿ ತಾರಿಣಿ ಅಧ್ಯಕ್ಷರಾಗಿದ್ದಾರೆ. ಕೇಂದ್ರ ಸರ್ಕಾರದ ಐಎಎಸ್ ಅಧಿಕಾರಿ ಯಶಪಾಲ್ ಸಿಂಗ್ ಮತ್ತು ರಾಜ್ಯ ಸರ್ಕಾರದ ಪ್ರತಿನಿಧಿಯಾಗಿ ನಿವೃತ್ತ ಐಎಎಸ್ ಅಧಿಕಾರಿ ರಮಣ ರೆಡ್ಡಿ ಸದಸ್ಯರಾಗಿದ್ದಾರೆ ಎಂದು ವಿವರಿಸಿದರು.

ಸಮಿತಿಯಲ್ಲಿ ಕೇಂದ್ರವನ್ನು ಪ್ರತಿನಿಧಿಸುವ ಇಬ್ಬರು ಪ್ರತಿನಿಧಿಗಳಿದ್ದಾರೆ. ಬಹುಮತದ ಆಧಾರದ ಮೇಲೆ ನಿರ್ಣಯಗಳಾಗುತ್ತವೆ. ದರ ಏರಿಕೆ ನಿರ್ಣಯಾಗಬೇಕಾದರೆ ಕೇಂದ್ರ ಸರ್ಕಾರದವರ ಅಭಿಪ್ರಾಯಗಳು ಬಹುಮುಖ್ಯವಾಗಿವೆ. ದರ ಪರಿಷ್ಕರಣಾ ಸಮಿತಿಗೆ ಅಧ್ಯಕ್ಷರು ಹಾಗೂ ಸದಸ್ಯರನ್ನು ನೇಮಿಸುವುದು ಕೂಡ ಕೇಂದ್ರ ಸರ್ಕಾರವೇ ಆಗಿದೆ ಎಂದರು. ಸಮಿತಿ ಮೇಟ್ರೊ? ನಿರ್ವಹಣಾ ವೆಚ್ಚ, ಸಾಲ ಮರುಪಾವತಿ ಹಾಗೂ ಇತರ ವೆಚ್ಚಗಳನ್ನು ಪರಿಗಣಿಸಿ ಪ್ರಯಾಣ ದರ ಪರಿಷ್ಕರಣೆ ಮಾಡಿದೆ. ಸತ್ಯ ಕಣ್ಣೆದುರೇ ಇದೆ. ಆದರೂ ಬಿಜೆಪಿಯವರು ರಾಜ್ಯ ಸರ್ಕಾರ ಹೊಣೆ ಎಂದು ಹೇಳುತ್ತಿದ್ದಾರೆ ಎಂದು ಕಿಡಿಕಾರಿದರು.ಬಿಜೆಪಿಯವರಿಗೆ ದಿನನಿತ್ಯ ಒಂದೊಂದು ಸುಳ್ಳು ಹೇಳದೇ ಇದ್ದರೆ ನಿದ್ದೆ ಬರುವುದಿಲ್ಲ. ತಿಂದಿದ್ದು ಜೀರ್ಣವಾಗುವುದಿಲ್ಲ ಎಂದು ರಾಮಲಿಂಗಾರೆಡ್ಡಿ ಆಕ್ರೋಶ ವ್ಯಕ್ತಪಡಿಸಿದರು.



ಬೆಂಗಳೂರಿನಲ್ಲಿ ಖಾಲಿ ಟ್ರಂಪ್ ಹಿಡಿದು ಪ್ರತಿಭಟನೆ ನಡೆಸುವ ಸಂಸದ ತೇಜಸ್ವಿ ಸೂರ್ಯ ದೊಡ್ಡ ಡ್ರಾಮಾ ಮಾಸ್ಟರ್. ರಾಜಕಾರಣ ಬಿಟ್ಟು ಅವರು ನಾಟಕ ಕಂಪನಿ ಸೇರಿಕೊಳ್ಳುವುದು ಒಳ್ಳೆಯದು ಎಂದು ಲೇವಡಿ ಮಾಡಿದರು.
ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರಬೇಕಾದ ತೆರಿಗೆ ಬಾಕಿ ಬಗ್ಗೆ ರಾಜ್ಯದಿಂದ ಗೆದ್ದು ಹೋಗಿರುವ ಸಂಸದರು ಒಮೆಯು ಬಾಯಿಬಿಟ್ಟಿಲ್ಲ. ರಾಜ್ಯಕ್ಕೆ ನಿರಂತರವಾಗಿ ಅನ್ಯಾಯವಾಗುತ್ತಿದ್ದರು ಕೇಂದ್ರ ಸರ್ಕಾರ ಮಾಡಿದ್ದೆ ಸರಿ ಎಂದು ವಾದಿಸುತ್ತಾರೆ ಎಂದು ಅಸಮಧಾನ ವ್ಯಕ್ತ ಪಡಿಸಿದರು. ರಾಜ್ಯ ಸರ್ಕಾರದ ಬೊಕ್ಕಸ ಖಾಲಿಯಾಗಿದೆ ಹೇಳುವ ಬಿಜೆಪಿಯವರು, ಕೇಂದ್ರ ಸರ್ಕಾರದ ಆರ್ಥಿಕ ಸ್ಥಿತಿಗತಿಯ ಬಗ್ಗೆ ಮಾತನಾಡುತ್ತಾರೆಯೇ ಎಂದು ಸವಾಲು ಹಾಕಿದರು.

ಯುಪಿಎ ಅವಧಿಯಲ್ಲಿ ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿರುವವರೆಗೂ ದೇಶದ ಒಟ್ಟು ಸಾಲ 52 ಲಕ್ಷ ಕೋಟಿ ಮಾತ್ರವಿತ್ತು. ಈಗ ಒಟ್ಟು ಸಾಲದ ಒಟ್ಟು ಪ್ರಮಾಣ 214 ಲಕ್ಷ ಕೋಟಿಯಾಗಿದೆ. ಸ್ವತಂತ್ರ ನಂತರ 2014ರ ವರೆಗೆ ಎಲ್ಲಾ ಸರ್ಕಾರಗಳು 52 ಲಕ್ಷ ಕೋಟಿ ರೂಪಾಯಿ ಮಾತ್ರ ಸಾಲ ಮಾಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರು 11 ವರ್ಷದಲ್ಲಿ 152 ಲಕ್ಷ ಕೋಟಿ ರೂಪಾಯಿ ಸಾಲ ಮಾಡಿದ್ದಾರೆ. ಇದನ್ನು ಏನೆಂದು ಕರೆಯಬೇಕು ಎಂದು ಪ್ರಶ್ನಿಸಿದರು.

# ಮೆಟ್ರೋ ದರ ಏರಿಕೆ ವಿರುದ್ಧ ಬಿಜೆಪಿ ಖಾಲಿ ಟ್ರಂಕ್ ಪ್ರತಿಭಟನೆ ತೇಜಸ್ವಿ ರಾಮಮೂರ್ತಿ ಸೇರಿ ಹಲವರ ಬಂಧನ

**ಬೆಂಗಳೂರು,ಫೆ.9–** ನಮ್ಮ ಮೆಟ್ರೋ ಪ್ರಯಾಣದರ ಏರಿಕೆ ವಿರುದ್ಧ ನಗರದ ಆರ್‌ವಿ ರೋಡ್ ಮೆಟ್ರೋ ನಿಲ್ದಾಣದಲ್ಲಿ ಖಾಲಿ ಟ್ರಂಕ್ ಪ್ರದರ್ಶಿಸಿ ಪ್ರತಿಭಟನೆ ನಡೆಸಿದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ, ಶಾಸಕ ರಾಮಮೂರ್ತಿ ಸೇರಿ ಹಲವರನ್ನು ಪೊಲೀಸರು ವಶಕ್ಕೆ ಪಡೆದರು.

ನಮ್ಮ ಮೆಟ್ರೋ ಪ್ರಯಾಣದರ ಏರಿಕೆ ವಿರುದ್ಧ ಹಲವಾರು ಬಿಜೆಪಿ ಮುಖಂಡರು ಕಾರ್ಯಕರ್ತರ ಜೊತೆ ಆರ್‌ವಿ ರೋಡ್ ಮೆಟ್ರೋ ನಿಲ್ದಾಣದಲ್ಲಿ ಇಂದು ಬೆಳಿಗ್ಗೆ ಖಾಲಿ ಟ್ರಂಕ್ ಪ್ರದರ್ಶಿಸಿ ಪ್ರತಿಭಟನೆ ನಡೆಸಿದ ಸಂಸದ ತೇಜಸ್ವಿ ಸೂರ್ಯ, ಶಾಸಕ ರಾಮಮೂರ್ತಿ ಸೇರಿ ಹಲವರನ್ನು ವಶಕ್ಕೆ ಪಡೆದ ಪೊಲೀಸರು ಬಳಿಕ ಬಿಡುಗಡೆ ಮಾಡಿದರು.
ಪ್ರತಿಭಟನೆ ವೇಳೆ ಕಾಂಗ್ರೆಸ್ ಸರ್ಕಾರ ಖಾಲಿ ಸರ್ಕಾರ' ಎಂದು ಬರೆದಿರುವ ಟ್ರಂಕ್‌ನಲ್ಲಿ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಗಳ ಭಾವಚಿತ್ರಗಳಿದ್ದವು.


ಪೊಲೀಸರ ವಶಕ್ಕೆ ಪಡೆಯುವ ಮುನ್ನ ಸುದ್ಧಿಗಾರರ ಜೊತೆ ಮಾತನಾಡಿದ ತೇಜಸ್ವಿ ಸೂರ್ಯ,ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಸರ್ಕಾರದ ಗೂಂಡಾಗಳಿಗೇ ಹೆದರದೆ ಹೋರಾಟ ಮಾಡಿ ಬಂದಿದ್ದೇನೆ. ನಮ್ಮದೇ ಕ್ಷೇತ್ರದಲ್ಲಿ ನೋಟಿಸ್ ಕೊಟ್ಟು ನನ್ನನ್ನು ಹೆದರಿಸಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.ಪ್ರತಿಭಟನೆ ನಡೆಸದಂತೆ ಪೊಲೀಸರು ನೀಡಿರುವ ನೋಟಿಸ್ ವಿಚಾರವಾಗಿ ಆಕ್ರೋಶ ವ್ಯಕ್ತಪಡಿಸಿದ ಸೂರ್ಯ, ನಮ್ಮದೇ ಪ್ರದೇಶದಲ್ಲಿ ನನ್ನನ್ನು ಹೆದರಿಸಲು ಸಾಧ್ಯವಿಲ್ಲ ಎಂದರು. ನಾವು ಮೆರವಣಿಗೆ, ಧರಣಿ ಅಥವಾ ಮುಷ್ಕರ ನಡೆಸುತ್ತಿಲ್ಲ, ಬದಲಾಗಿ ಸಾಮಾನ್ಯ ನಾಗರಿಕನಾಗಿ ಮೆಟ್ರೋದಲ್ಲಿ ಪ್ರಯಾಣಿಸುತ್ತಿದ್ದೇನೆ ಎಂದು ಅವರು ತಿಳಿಸಿದರು.
ಈ ಹೋರಾಟವನ್ನು ತೀವ್ರಗೊಳಿಸುವುದಾಗಿ ಹೇಳಿದ ಸೂರ್ಯ,




ಬೆಂಗಳೂರು ಮೆಟ್ರೋಗೆ ಸರ್ಕಾರ ಬಜೆಟ್ ಬೆಂಬಲ ನೀಡಬೇಕು ಮತ್ತು ಹೊಸ ದರ ನಿಗದಿ ಸಮಿತಿ ರಚಿಸಬೇಕು ಎಂದು ಮುಖ್ಯಮಂತ್ರಿಗಳಿಗೆ ಆಗ್ರಹಿಸಿದರು. ಬಿಎಂಆರ್ ಸಿಎಲ್ ಭಾರತದ ಅತಿ ದುಬಾರಿ ಮೆಟ್ರೋ ಆಗಬಾರದು. ಬದಲಿಗೆ ಶುದ್ಧ, ಸುರಕ್ಷಿತ ಮತ್ತು ದಕ್ಷ ಮೆಟ್ರೋ ಆಗಬೇಕು ಎಂದು ಅವರು ಒತ್ತಾಯಿಸಿದರು.

ಈ ಬಗ್ಗೆ ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ವಿಡಿಯೋ ಪೋಸ್ಟ್ ಮಾಡಿರುವ ತೇಜಸ್ವಿ ಸೂರ್ಯ ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.ಕಾಂಗ್ರೆಸ್ ಆಡಳಿತದ ಕರ್ನಾಟಕದಲ್ಲಿ ಸಾರ್ವಜನಿಕ ಸಾರಿಗೆ ಮತ್ತು ಉತ್ತಮ ಮೂಲಸೌಕರ್ಯಕ್ಕೆ ಬೇಡಿಕೆ ಇಟ್ಟರೆ ಬಂಧನವಾಗುತ್ತದೆ. ಉತ್ತಮ ಬೆಂಗಳೂರಿಗಾಗಿ ಹೋರಾಟ ಮಾಡುವುದು ಅಪರಾಧವಾಗಿದ್ದರೆ, ನಾನು ಸಾವಿರ ಬಾರಿ ಬಂಧನಕ್ಕೊಳಗಾಗಲು ಸಿದ್ಧ ಎಂದು ತೇಜಸ್ವಿ ಸೂರ್ಯ ಹೇಳಿದ್ದಾರೆ. ಮೆಟ್ರೋ ದರ ಏರಿಕೆ ಮಧ್ಯಮ ವರ್ಗದ ಜನರಿಗೆ ಭಾರವಾಗಿದ್ದು, ಸರ್ಕಾರ ತಕ್ಷಣ ಮಧ್ಯಪ್ರವೇಶಿಸಬೇಕು ಎಂದು ಆಗ್ರಹಿಸಿದ್ದಾರೆ.

# ಜಿಲ್ಲಾ ಪಂಚಾಯತ ಕಟ್ಟಡ ಮಂಜೂರಾತಿ: ಸಿಎಂ, ಸಚಿವರಿಗೆ ಅಭಿನಂದನೆ





**ಕಲಬುರಗಿ,ಫೆ.9–**ಕಲಬುರಗಿ ಜಿಲ್ಲಾ ಪಂಚಾಯತಗೆ ಪಂಚಾಯತ್ ವ್ಯವಸ್ಥೆ ಆರಂಭದಿಮದಲು ಅಂದರೆ 1986 ರಿಂದ ಸ್ವಂತ ಕಟ್ಟಡ ಇಲ್ಲದೆ ನಗರದ ಜಗತ್ ವೃತ್ತದಲ್ಲಿರುವ ಹಳೇ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಜಿಲ್ಲಾ ಪಂಚಾಯತಿಗೆ 4 ದಶಕಗಳ ನಂತರ ಸ್ವಂತ ಕಟ್ಟಡ ಹೊಂದುವ ಯೋಗ ಇದೀಗ ಕೂಡಿ ಬಂದಿದೆ.
ಗುರುವಾರ ಜರುಗಿದ ಸಚಿವ ಸಂಪುಟ ಸಭೆಯಲ್ಲಿ 49.65 ಕೋಟಿ ಅಂದಾಜು ಮೊತ್ತದ ಅನುದಾನದಲ್ಲಿ ಹೊಸ ಕಟ್ಟಡ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದ್ದು ಇದಕ್ಕೆ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಜಿಲ್ಲಾ ಪಂಚಾಯತಿಯ ಪ್ರತಿನಿಧಿಯಾದ ವಿಕಾಸ ಸಜ್ಜನ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ವಿಶೇಷ ಕಾಳಜಿ ಹಾಗೂ ಸತತ ಪ್ರಯತ್ನದ ಪರಿಣಾಮ ಕಲಬುರಗಿ ಜಿಲ್ಲಾ ಪಂಚಾಯತ್ ಕಚೇರಿಗೆ ಸ್ವಂತ ಕಟ್ಟಡ ಪಡೆಯುವ ಭಾಗ್ಯ ಒದಗಿ ಬಂದಿದೆ ಮತ್ತು ಇವರೊಂದಿಗೆ ಸತತವಾಗಿ ಸಂಪರ್ಕ ಸಾಧಿಸಿ ಸಚಿವರ ಮಾರ್ಗದರ್ಶನಂತೆ ಕೆಲಸ ನಿರ್ವಹಿಸಿರುವ ಕಲಬುರಗಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಭಂವರಸಿಂಗ್ ಮೀನಾ ಅವರಿಗೆ ಜಿಲ್ಲಾ ಪಂಚಾಯತ ಸಮಸ್ತ ಅಧಿಕಾರಿ/ಸಿಬ್ಬಂದಿಗಳ ಪರವಾಗಿ ಹೃತ್ಪೂರ್ವಕ ಅಭಿನಂದೆನಗಳು ಸಲ್ಲಿಸಲಾಯಿತು.
ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಅಧಿಕಾರಿ/ಸಿಬ್ಬಂದಿಗಳು ಮತ್ತು ಜಿಲ್ಲಾ ಪಂಚಾಯತ್ ವ್ಯಾಪ್ತಿಯ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# AIಗೆ ಗುಲಾಮರಾಗಬೇಡಿ, ಅದನ್ನು ಸಾಮರ್ಥ್ಯ ವೃದ್ಧಿಗೆ ಬಳಸಿಕೊಳ್ಳಿ : ಪ್ರಧಾನಿ ಮೋದಿ ಸಲಹೆ

**ನವದೆಹಲಿ, ಫೆ. 9:** ಕೃತಕ ಬುದ್ಧಿಮತ್ತೆಗೆ ಗುಲಾಮ ರಾಗಬೇಡಿ ಬದಲಿಗೆ ಅದನ್ನು ಸಾಮರ್ಥ್ಯ ವೃದ್ಧಿಗೆ ಬಳಸಿಕೊಳ್ಳಿ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ವಿದ್ಯಾರ್ಥಿ ಸಮುದಾಯಕ್ಕೆ ಸಲಹೆ ನೀಡಿದ್ದಾರೆ.
ಪರೀಕ್ಷಾ ಪೆ ಚರ್ಚಾ ಕಾರ್ಯಕ್ರಮದ ಎರಡನೇ ಸಂಚಿಕೆಯಲ್ಲಿ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿರುವ ಪ್ರಧಾನಿ ಮೋದಿ ಅವರು, ಸ್ಟಾರ್ಟ್‌ಅಪ್‌ಗಳಿಂದ ಹಿಡಿದು ಪರೀಕ್ಷಾ ತಯಾರಿ ಯವರೆಗೆ ವಿವಿಧ ವಿಷಯಗಳ ಕುರಿತು ವಿದ್ಯಾರ್ಥಿಗಳೊಂದಿಗೆ ಸಂವಹನ ನಡೆಸಿದ್ದಾರೆ.
ತಂತ್ರಜ್ಞಾನ ಬಂದ ಪ್ರತಿಯೊಂದು ಯುಗದಲ್ಲೂ ಇಂತಹ ಚರ್ಚೆಗಳು ಉದ್ಭವಿಸುತ್ತವೆ, ನಾವು ಅದರ ಬಗ್ಗೆ ಭಯಪಡ 'ಬಾರದು. ಅದರ ಗುಲಾಮರಾಗಲು ನಾವು ಶ್ರಮಿಸಬಾರದು.ಅದು ನಮ್ಮ ಯಜಮಾನರಾಗಲು ನಾವು ಬಿಡುವುದಿಲ್ಲ.ನೀವು ಅದರ ಗುಲಾಮರಾಗದಂತೆ ನೋಡಿಕೊಳ್ಳಬೇಕು ಎಂದರು.

ಉದ್ಯೊಗಗಳ ಸ್ವರೂಪ ಬದಲಾಗುತ್ತಲೇ ಇರುತ್ತದೆ. ಆದ್ದರಿಂದ ತಂತ್ರಜ್ಞಾನವನ್ನು ಅರ್ಥಮಾಡಿಕೊಳ್ಳಬೇಕು ಎಂದು ಪ್ರಧಾನಿ ಮೋದಿ ಹೇಳಿದರು. ನಾವು ಭಯಪಡಬೇಕಾಗಿಲ್ಲ ಎಂದು ಸಲಹೆ ನೀಡಿದ್ದಾರೆ.ಪರೀಕ್ಷಾ ಪೆ ಚರ್ಚಾ 2026 ರ ಎರಡನೇ ಸಂಚಿಕೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ತಮಿಳುನಾಡಿನ ವಿದ್ಯಾರ್ಥಿಗಳೊಂದಿಗೆ ತಮ್ಮ ಸಂವಾದವನ್ನು ಪ್ರಾರಂಭಿಸಿದರು. ಛತ್ತಿಸ್‌ಗಢದ ವಿದ್ಯಾರ್ಥಿಯೊಬ್ಬರು ಭಾರತದಲ್ಲಿ ಭೇಟಿ ನೀಡಲು ಉತ್ತಮ ಸ್ಥಳಗಳ ಬಗ್ಗೆ ಕೇಳಿದರು. ಪ್ರಧಾನಿ ಮೋದಿ ಕೆಲವು ಉಪಯುಕ್ತ ಸಲಹೆಗಳನ್ನು ನೀಡಿದರು.

ಸ್ಫೂರ್ತಿಯ ಜೊತೆಗೆ ಶಿಸ್ತು ಕೂಡ ಅತ್ಯಗತ್ಯ ಎಂದು ಹೇಳಿದರು. ಶಿಸ್ತು ಇಲ್ಲದಿದ್ದರೆ, ಯಾವುದೇ ಸ್ಫೂರ್ತಿ ಕೆಲಸ ಮಾಡುವುದಿಲ್ಲ. ರೈತ ತನ್ನ ಪಕ್ಕದಲ್ಲಿರುವ ರೈತನಿಂದ ಸ್ಫೂರ್ತಿ ಪಡೆದು , ತಾನು ಕೂಡ ಸಂಪಾದಿಸುವ ಛಲ ಬೆಳೆಸಿಕೊಳ್ಳುತ್ತಾರೆ. ಶಿಸ್ತು ಇಲ್ಲದೆ, ಸ್ಫೂರ್ತಿ ಕೆಲಸ ಮಾಡುವುದಿಲ್ಲ, ನೋಡಿದಾಕ್ಷಣ ಸ್ಫೂರ್ತಿ ಸಿಗುವುದಿಲ್ಲ, ಆ ಹಾದಿಯಲ್ಲೇ ನಡೆಯುವುದು ಕೂಡ ಮುಖ್ಯವಾಗುತ್ತದೆ ಎಂದಿದ್ದಾರೆ.
ಇಂದು ನಾನು ಕಷ್ಟಪಟ್ಟು ವಿಕಸಿತ ಭಾರತದ ಬುನಾದಿ ಹಾಕುತ್ತಿರುವುದು ನಿಮಗಾಗಿ. ಸ್ಟಾರ್ಟ್‌ಅಪ್ ಪ್ರಾರಂಭಿಸುವುದು ಹೇಗೆ ಎಂಬ ವಿದ್ಯಾರ್ಥಿಯೊಬ್ಬರ ಪ್ರಶ್ನೆಗೆ ಉತ್ತರಿಸಿದ ಪ್ರಧಾನಿ ಮೋದಿ, ನೀವು ಸಣ್ಣ ಸ್ಟಾರ್ಟ್‌ಅಪ್ ಶುರು ಮಾಡಬಹುದು. ನೀವು ನಿಮ್ಮ ಅಧ್ಯಯನ ಮತ್ತು ನಿಮ್ಮ ವೃತ್ತಿಜೀವನ ಎರಡನ್ನೂ



ಮುಂದುವರಿಸಲು ಬಯಸಿದರೆ, ನೀವು ಪ್ರತಿ ವಾರ ನಿಮ್ಮ ವೃತ್ತಿಜೀವನಕ್ಕೆ ಸ್ವಲ್ಪ ಸಮಯವನ್ನು ಮೀಸಲಿಡಲು ಪ್ರಾರಂಭಿಸಬೇಕು ಎಂದರು. ಪರೀಕ್ಷೆಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಲು ಹಿಂದಿನ ಪತ್ರಿಕೆಗಳನ್ನು ಅಭ್ಯಾಸ ಮಾಡಿ ಮತ್ತು ಉತ್ತಮ ನಿದ್ರೆ ಮಾಡುವಂತೆ ಪ್ರಧಾನಿ ವಿದ್ಯಾರ್ಥಿಗಳನ್ನು ಒತ್ತಾಯಿಸಿದರು.ಪರೀಕ್ಷೆಗಳಿಗೆ ಚೆನ್ನಾಗಿ ತಯಾರಿ ನಡೆಸಿದ ನಂತರ ನೀವು ಎಂದಿಗೂ ಉದ್ವಿಗ್ನತೆಯನ್ನು ಅನುಭವಿಸುವುದಿಲ್ಲ. ರಾತ್ರಿಯ ಉತ್ತಮ ನಿದ್ರೆಯು ದಿನದ ಉಳಿದ ಸಮಯ ನಿಮ್ಮನ್ನು ಹರ್ಷಚಿತ್ತದಿಂದ ಇರಿಸುತ್ತದೆ ಎಂದು ಮೋದಿ ಹೇಳಿದರು.

ವಿದ್ಯಾರ್ಥಿಯಾಗಿದ್ದ ದಿನಗಳಲ್ಲಿ ತಮ್ಮ ಶಿಕ್ಷಕರ ಪಾತ್ರವನ್ನು ಮತ್ತು ಆರೋಗ್ಯವಾಗಿರಲು ವ್ಯಾಯಾಮದ ಬಗ್ಗೆ ಅವರ ಒತ್ತಾಯವನ್ನು ಪ್ರಧಾನಿ ಸ್ಮರಿಸಿದರು.ನೀವು ಯಾವುದೇ ಮಹಾನ್ ವ್ಯಕ್ತಿಯನ್ನು ಕೇಳಿದರೆ, ಅವರ ತಾಯಿ ಮತ್ತು ಶಿಕ್ಷಕರು ತಮ್ಮ ಜೀವನವನ್ನು ರೂಪಿಸಿಕೊಳ್ಳಲು ಸಹಾಯ ಮಾಡಿದ್ದಾರೆ ಎಂದು ಅವರು ಹೇಳುತ್ತಾರೆ ಎಂದು ಮೋದಿ ಹೇಳಿದರು.
ನಾಯಕತ್ವದ ಬಗ್ಗೆ, ಪ್ರಧಾನ ಮಂತ್ರಿಗಳು ಒಂದು ಪ್ರಮುಖ ಗುಣವೆಂದರೆ ಉತ್ತಮವಾಗಿ ಸಂವಹನ ನಡೆಸುವ ಸಾಮರ್ಥ್ಯ ಎಂದು ಹೇಳಿದರು.

ನಾಯಕತ್ವ ಎಂದರೆ ಚುನಾವಣೆಗಳಲ್ಲಿ ಸ್ಪರ್ಧಿಸುವುದು ಮಾತ್ರವಲ್ಲ. ಪ್ರಮುಖ ನಾಯಕತ್ವದ ಗುಣವೆಂದರೆ ಕನಿಷ್ಠ ಹತ್ತು ಜನರಿಗೆ ನಿಮ್ಮ ಆಲೋಚನೆಗಳನ್ನು ಸ್ಪಷ್ಟವಾಗಿ ತಿಳಿಸುವ ಸಾಮರ್ಥ್ಯ ಎಂದು ಪ್ರಧಾನಿ ಹೇಳಿದರು.ಈ ವರ್ಷ, ಮೊದಲ ಬಾರಿಗೆ, ಪರೀಕ್ಷಾ ಪೆ ಚರ್ಚಾ ಒಂದು ಸ್ವರೂಪವನ್ನು ಅಳವಡಿಸಿಕೊಂಡಿದೆ, ಇದರಲ್ಲಿ ಪ್ರಧಾನಿಯವರು ನಾಲ್ಕು ರಾಜ್ಯಗಳಾದ ತಮಿಳುನಾಡು, ಛತ್ತಿಸ್‌ಗಢ, ಗುಜರಾತ್ ಮತ್ತು ಅಸ್ಸಾಂನ ವಿದ್ಯಾರ್ಥಿಗಳೊಂದಿಗೆ ಮೋದಿ ಸಂವಾದ ನಡೆಸಿದರು.

# ಬಸವಗೀತೆ ಸತ್ಯ ಸಂವಾದ 9 ಸಂಪುಟಗಳ ಪುಸ್ತಕ ಲೋಕಾರ್ಪಣೆ ಮಾಂತ್ರಿಕ ವಾಸ್ತವಿಕ ತಂತ್ರದ ಕೃತಿ: ಡಾ. ಶ್ರೀಶೈಲ ನಾಗರಾಳ



**ಕಲಬುರಗಿ,ಫೆ.9–** ಓದುವ, ಬರೆಯುವ ಪರಿಪಾಠ ಕಡಿಮೆಯಾಗಿರುವ ಈ ದಿನಗಳಲ್ಲಿ ಪುಸ್ತಕ ಸಂಸ್ಕೃತಿ ಬೆಳೆಸುವ ನಿಟ್ಟಿನಲ್ಲಿ ಹೆಚ್ಚಿನ
ಪುಸ್ತಕಗಳು ಬಿಡುಗಡೆಯಾಗುತ್ತಿರುವುದು, ಪ್ರಕಟವಾಗುತ್ತಿರುವುದು ಅಭಿಮಾನದ ಸಂಗತಿ ಎಂದು ವಿಶ್ರಾಂತ ಪ್ರಾಧ್ಯಾಪಕಿ ಡಾ. ನೀಲಾಂಬಿಕಾ ಪೊಲೀಸ್ ಪಾಟೀಲ ಅಭಿಪ್ರಾಯಪಟ್ಟರು.
ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ವತಿಯಿಂದ ನಗರದ ಕನ್ನಡ ಭವನದಲ್ಲಿ ನಿನ್ನೆ ಭಾನುವಾರ ಸಂಜೆ ಆಯೋಜಿಸಿದ್ದ ಸುದ್ದಿಮೂಲ ಕನ್ನಡ ದಿನಪತ್ರಿಕೆಯ ಸಂಪಾದಕ ಬಸವರಾಜ ಸ್ವಾಮಿ ವಿರಚಿತ "ಬಸವಗೀತೆ" ಸತ್ಯಸಂವಾದ (9 ಸಂಪುಟಗಳ ಗುಚ್ಛ) ಪುಸ್ತಕ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಕಲಬುರಗಿ ಈಗ ಪುಸ್ತಕ ಹಬ್ ಆಗುತ್ತಿದೆ. ಭವಿಷ್ಯತ್ತಿನಲ್ಲಿ ಪುಸ್ತಕಗಳ ಸ್ಥಾನಮಾನ ಏನು? ಎಂಬುದರ ಬಗ್ಗೆ ಗಂಭೀರವಾಗಿ ಆಲೋಚಿಸಬೇಕು ಎಂದು ತಿಳಿಸಿದರು.
ಪುಸ್ತಕಗಳ ಕುರಿತು ಮಾತನಾಡಿದ ಡಾ. ಶ್ರೀಶೈಲ ನಾಗರಾಳ ಅವರು, ಬಸವಣ್ಣ ಹಾಗೂ ಆತನ ಸಮಕಾಲೀನರು ಪರಸ್ಪರ ನಡೆಸಿರುವ ಸತ್ಯ ಸಂವಾದ ಬಹಳ ಅಪರೂಪದ್ದಾಗಿದೆ. ಮಾಂತ್ರಿಕ ವಾಸ್ತವಿಕ ತಂತ್ರ ಬಳಸಿ ಬರೆದಿರುವ ಈ ಕೃತಿ ಕನ್ನಡದಲ್ಲಿ ಹೊಸ ಪ್ರಯೋಗ ಎಂದರು.
1571 ಪುಟಗಳ ವ್ಯಾಪ್ತಿಯ ಈ ಸಂಪುಟದಲ್ಲಿ ಬಸವಣ್ಣ ಹಾಗೂ ಆತನ ಸಮಕಾಲೀನ ಶರಣರು ನಡೆಸಿದ ಪ್ರಶ್ನೋತ್ತರಗಳಿವೆ. ಬದುಕಿನ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಒದಗಿಸುವಂತಿವೆ. ಓದುಗರೊಡನೆ ಅನುಶೀಲನೆ ಮಾಡಿ ಬಿಡುವು ಕೊಟ್ಟು ಮತ್ತೊಂದು ವಿಷಯದ ಕಡೆಗೆ ಎಳೆದೊಯ್ಯುವಂತಿದೆ ಎಂದು ತಿಳಿಸಿದರು.
ಪ್ರಗತಿಪರ ಚಿಂತಕ ಪ್ರೊ ಆರ್.ಕೆ. ಹುಡಗಿ ಮುಖ್ಯ ಅತಿಥಿಯಾಗಿದ್ದರು. ಕೃತಿಕಾರ ಬಸವರಾಜ ಸ್ವಾಮಿ ಮಾತನಾಡಿ, ಮನೋಕಾಯವನ್ನು ಜ್ಞಾನಕಾಯವನ್ನಾಗಿ ಮಾಡಿಕೊಂಡಿದ್ದ ಶರಣರು ದೇಹಧರ್ಮ, ಪ್ರಕೃತಿಧರ್ಮದ ಬಗ್ಗೆ ಮಾತನಾಡಿದ್ದಾರೆ. ಮಹಾಪುರುಷರದ್ದು ಧರ್ಮ ಸ್ಥಾಪನೆಯ ಗುರಿಯಾಗಿರಲಿಲ್ಲ ಅವರು ಸ್ಥಾಪಿಸಿದ್ದು ಮನುಷ್ಯ ಧರ್ಮ, ಸಹಜ ಧರ್ಮ, ಸರಳ ಧರ್ಮ ಎಂದು ಅವರು ವಿವರಿಸಿದರು.
ಮುಖ್ಯ ಅತಿಥಿಯಾಗಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಡಾ. ಶಿವರಂಜನ ಸತ್ಯಂಪೇಟೆ ಪ್ರಾಸ್ತಾವಿಕ ಮಾತನಾಡಿ, ವಚನಗಳ ಅಧ್ಯಯನ, ಸಂಗ್ರಹ, ಸಂಶೋಧನೆ ಕಾರ್ಯದ ಜೊತೆಗೆ ವಚನಗಳ ವಿವಿಧ ಆಯಾಮಗಳ ಬಗ್ಗೆ ಗುರುತಿಸಲಾಗುತ್ತಿದೆ. ಆದರೆ ವಚನಗಳ ಆಳ–ಅಗಲಕ್ಕೆ ಈವರೆಗೆ ಏರಲಾಗುತ್ತಿಲ್ಲ. ವಚನಗಳ ಬೆಳಕು, ಬೆಡಗು ಬೆರಗು ಮೂಡಿಸುವಂಥದ್ದಾಗಿದೆ ಎಂದರು.
ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ ಯಡ್ರಾಮಿ, ಸಂಘದ ಮಾಜಿ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ್ ಠಾಕೂರ ವೇದಿಕೆಯಲ್ಲಿದ್ದರು. ಜಿಲ್ಲಾ ಕಸಾಪ ಕೋಶಾಧ್ಯಕ್ಷ ಶರಣರಾಜ ಛಪ್ಪರಬಂದಿ ಅಧ್ಯಕ್ಷತೆ ವಹಿಸಿದ್ದರು. ಶಿವರಾಜ ಅಣಜಗಿ ನಿರೂಪಿಸಿದರು. ಸೋಮೇಶಗೌಡ ನಂದಿಕೂರ ಸ್ವಾಗತಿಸಿದರು. ಬಾಬುರಾವ ಕೋಬಾಳ ಪ್ರಾರ್ಥನೆಗೀತೆ ಹಾಡಿದರು. ಶ್ರೇಯಾ, ಸಹಸ್ರಾ ವಚನ ನೃತ್ಯ ಪ್ರದರ್ಶಿಸಿದರು.
ರವೀಂದ್ರ ಶಾಬಾದಿ, ಧರ್ಮಣ್ಣ ಧನ್ನಿ, ಎಸ್.ಎಸ್. ಪಾಟೀಲ, ಶರಣು ನೀರಡಗಿ, ಚಂದ್ರಕಾಂತ ತಡಪಳ್ಳಿ, ಡಾ. ಅಶೋಕ ದೊಡ್ಡಮನಿ, ವಿನೋದ ಜನೆವೆರಿ, ನಿಜಲಿಂಗ ದೊಡ್ಡಮನಿ, ಪಿಡ್ಡಪ್ಪ ಜಾಲಗಾರ, ವಿಠ್ಠಲ ಚಿಕಣಿ, ಶಿವಕುಮಾರ ತೊಟ್ನಳ್ಳಿ, ಸಂಜೀವಕುಮಾರ ಕಾಂಬಳೆ, ದೇವೇಂದ್ರಪ್ಪ ಅವಂಟಿ ಇತರರು ಉಪಸ್ಥಿತರಿದ್ದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**
**6360866626**

# ಫೆ.13ರಿಂದ ರಾಜ್ಯ ಮಟ್ಟದ ಶಸ್ತ್ರ ಚಿಕಿತ್ಸಾ ಸಮಾವೇಶ

**ರಾಯಚೂರು ಫೆ,9:** ರಾಯಚೂರು ಶಸ್ತ್ರ ಚಿಕಿತ್ಸಕರ ಸಂಘ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಸ್ತ್ರ ಚಿಕಿತ್ಸಾ ವಿಭಾಗ ಇವರುಗಳ ಸಂಯುಕ್ತಾಶ್ರಯದಲ್ಲಿ-2026ರ ರಾಜ್ಯ ಮಟ್ಟದ ಶಸ್ತ್ರ ಚಿಕಿತ್ಸಾ ಸಮಾವೇಶವನ್ನು ನಗರದ ರಿಮ್ಸ್ ಆಡಿಟೋರಿಯಂ ನಲ್ಲಿ ಫೆ.13, 14 ಹಾಗೂ 15ರಂದು ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ.
ಸಮಾವೇಶವನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಶಸ್ತ್ರ ಚಿಕಿತ್ಸಾ ಸಂಘದ ರಾಷ್ಟ್ರೀಯ ಅಧ್ಯಕ್ಷರಾದ ಡಾ.ಮರುಥು ಪಾಂಡ್ಯನ್, ಶಸ್ತ್ರ ಚಿಕಿತ್ಸಾ ಸಂಘದ ರಾಜಾಧ್ಯಕ್ಷರಾದ ಡಾ.ರಾಜಗೋಪಾಲ ಶಣೈ, ಡಾ.ನಾಗರಾಜ ಭಾಲ್ಕಿ ಅವರು ಭಾಗವಹಿಸಲಿದ್ದಾರೆ.
ಈ ಸಮಾವೇಶಕ್ಕೆ ರಾಷ್ಟ್ರ, ರಾಜ್ಯ ಮಟ್ಟದ ಒಂದೂ ಸಾವಿರಕ್ಕೂ ಹೆಚ್ಚು ಶಸ್ತ್ರ ಚಿಕಿತ್ಸಾ ತಜ್ಞರುಗಳು ಭಾಗವಹಿಸಲಿದ್ದಾರೆ ಎಂದು ರಿಮ್ಸ್ ಬೋಧಕ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ.ಎಸ್.ಡಿ. ಮಂಡೋಲ್ಕರ್, ಸಂಘಟನಾ ಕಾರ್ಯದರ್ಶಿಗಳು ಆಗಿರುವ ರಾಜೀವಗಾಂಧಿ ಸೂಪರ್ ಸ್ಪೇಷಾಲಿಟಿ (ಓಪೆಕ್) ಅಸ್ಪತ್ರೆಯ ವಿಶೇಷಾಧಿಕಾರಿಗಳಾದ ಡಾ.ರಮೇಶ ಸಿ.ಸಾಗರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಡಳಿತದಿಂದ ಫೆ.10ರಂದು ಕಾಯಕ ಶರಣರ ಜಯಂತಿ

**ರಾಯಚೂರು ಫೆ,9:** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಕಾಯಕ ಶರಣರ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಫೆ.10ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.
ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.
ಯುವ ಸಾಹಿತಿಗಳಾದ ಈರಣ್ಣ ಬೆಂಗಾಲಿ ಅವರು ಕಾಯಕ ಶರಣರ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಕ್ತಿನಗರ ಜೆಸ್ಕಾಂನಿಂದ ಫೆ.10ರಂದು ಗ್ರಾಹಕರ ಕುಂದುಕೊರತೆ ಸಭೆ

**ರಾಯಚೂರು ಫೆ,9:**ಇಲ್ಲಿನ ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗದ ವ್ಯಾಪ್ತಿಯಲ್ಲಿ ಫೆ.10ರ ಮಧ್ಯಾಹ್ನ 3ಗಂಟೆಗೆ ಗ್ರಾಹಕರ ಕುಂದುಕೊರತೆ ಸಭೆಯನ್ನು ಅಧೀಕ್ಷಕ ಅಭಿಯಂತರರ ಅವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಸಭೆಗೆ ಶಕ್ತಿನಗರ ಉಪ ವಿಭಾಗ ವ್ಯಾಪ್ತಿಯ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಶಕ್ತಿನಗರ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ನಾತಕ ಪದವಿಗಳನ್ನು ಪ್ರಾರಂಭಿಸಲು ಅರ್ಜಿ ಆಹ್ವಾನ

**ರಾಯಚೂರು ಫೆ,9:** ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರಿನ ವ್ಯಾಪ್ತಿಯ ಬೀದರ, ಕಲಬುರಗಿ, ಯಾದಗಿರ, ಕೊಪ್ಪಳ, ವಿಜಯನಗರ, ಬಳ್ಳಾರಿ ಮತ್ತು ರಾಯಚೂರಿನಲ್ಲಿ ಕರ್ನಾಟಕ ರಾಜ್ಯದ ಸಂಘಗಳ ನೋಂದಣಿ ಕಾಯ್ದೆಯಡಿಯಲ್ಲಿ ನೋಂದಾಯಿಸಲಾದ ಸದಸ್ಯತ್ವ, ಅಂಗ ಸಂಸ್ಥೆಗಳ, ಸಂಘಗಳ ಅಡಿಯಲ್ಲಿ ನೋಂದಾಯಿಸಲ್ಪಟ ಟ್ರಸ್ಟಳ ಸಂಯೋಜಿತ ಖಾಸಗಿ ಮಹಾವಿದ್ಯಾಲಯದಲ್ಲಿ ಶೈಕ್ಷಣಿಕ ವರ್ಷ 2026-27ನೇ ಸಾಲಿನ ಕೃಷಿ ಮತ್ತು ಸಂಬಂಧಿತ ಸ್ನಾತಕ ಪದವಿಗಳನ್ನು ಪ್ರಾರಂಭಿಸಲು ಅರ್ಜಿ ಆಹ್ವಾನಿಸಲಾಗಿದೆ.

ಈ ಅರ್ಜಿ ನಮೂನೆಯನ್ನು ಮತ್ತು ಅರ್ಜಿಗೆ ಸಂಬಂಧಿಸಿದ ಮಾರ್ಗಸೂಚಿ ಹಾಗೂ ಅರ್ಹತಾ ಮಾನದಂಡಗಳನ್ನು ವಿಶ್ವವಿದ್ಯಾಲಯದ ಅಂತರ್ಜಾಲ: www.uasraichur.karnataka.gov.in ನಲ್ಲಿ ದಿನಾಂಕ: 14-02-2026 ರಿಂದ ಪಡೆಯಬಹುದು. ಭರ್ತಿ ಮಾಡಿದ ಅರ್ಜಿ ನಮೂನೆಗಳನ್ನು ಸಮಂಜಸ ದಾಖಲಾತಿ ಹಾಗೂ ಶುಲ್ಕಗಳೊಂದಿಗೆ ಕುಲಸಚಿವರು, ಕೃಷಿ ವಿಜ್ಞಾಗಳ ವಿಶ್ವವಿದ್ಯಾಲಯ, ಲಿಂಗಸೂಗುರ ರಸ್ತೆ, ರಾಯಚೂರು-584104 ಇವರ ಕಚೇರಿಗೆ ದಿನಾಂಕ: 10-03-2026ರ ಸಂಜೆ 5.ಗಂಟೆಯ ಒಳಗೆ ತಲುಪುವಂತೆ ಸಲ್ಲಿಸಬೇಕು. ಹಾಗೂ ಯಾವುದೇ ವಿಷಯಾದ ಮಾಹಿತಿಗಾಗಿ ಕುಲಸಚಿವರ ದೂರವಾಣಿ ಸಂಖ್ಯೆ: 08532-220157ಗೆ ಮತ್ತು ಮಿಂಚಾಂಚೆ registrar.uasraichur.edu.in ಸಂಪರ್ಕಿಸಬಹುದಾಗಿದೆ ಎಂದು ಕುಲ ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**
**6360866626**

# ಜಿ ರಾಮ್ ಜಿ ಒಳ್ಳೆಯ ಯೋಜನೆಯಾಗಿದೆ ಚಲುವಾದಿ ನಾರಾಯಣ ಸ್ವಾಮಿ



ಧೈರ್ಯದ ದಾರಿ

**ಲಿಂಗಸುಗೂರು,ಫೆ.9-** ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಜಿ ರಾಮ್ ಜಿ ಒಳ್ಳೆಯ ಯೋಜನೆಯಾಗಿದೆ. ಉದ್ಯೋಗ ಖಾತ್ರಿ ದಿನಗಳ ಸಂಖ್ಯೆಯನ್ನು 100 ರಿಂದ 125 ಕ್ಕೆ ಹೆಚ್ಚಿಸಿದ್ದು ಕೃಷಿ ಸೀಸನ್‌ನಲ್ಲಿ ಕೆಲಸಗಾರರ ಲಭ್ಯತೆ ಖಚಿತ ಪಡಿಸಲು 60 ದಿನಗಳ ಕಡ್ಡಾಯ ವಿರಾಮ ಅವಧಿ ಕೊಡಲಾಗಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಚಲುವಾದಿ ನಾರಾಯಣ ಸ್ವಾಮಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಚಲುವಾದಿ ಮಹಾಸಭಾದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ವಿಬಿ-ಜಿ-ರಾಮ್-ಜಿ ಎನ್ನುವುದು ರಾಮನ ಹೆಸರಿಟ್ಟಿಲ್ಲ. ಅದು ವಿಕಸಿತ ಭಾರತ ರೋಜಗಾರ ಮತ್ತು ಆಜೀವಿಕ (ಗ್ರಾಮೀಣ) ಮಿಷನ್ ಎಂಬುದಾಗಿದೆ. ಕೇಂದ್ರದಲ್ಲಿ ಯುಪಿಎ ಸರ್ಕಾರ ಇದ್ದಾಗ ಮಹಾತ್ಮಾ ಗಾಂಧಿ ಹೆಸರು ಸೇರಿಸಿದ್ದರು. ನಾವು ಯಾರ ಹೆಸರುಗಳನ್ನು ಸೇರಿಸಿಲ್ಲ. ವಿನಾ ಕಾರಣ ಕಾಂಗ್ರೆಸ್ ನವರು ರಾಮನ ಹೆಸರು ಬಂದಿದೆ ಎಂದು ವಿರೋಧ ಮಾಡುತ್ತಿದ್ದಾರೆ. ಗ್ರಾಮ ಪಂಚಾಯತಿಗಳೇ ಕೆಲಸದ ನಿರ್ಧಾರ ಮಾಡಬೇಕು. ಜಿ-ರಾಮ್-ಜಿ ಯೋಜನೆಯಲ್ಲಿ ನೇರವಾಗಿ ಫಲಾನುಭವಿ ಖಾತೆಗೆ ಹಣ ಜಮಾ ಆಗುತ್ತಿದ್ದರಿಂದ ಯಾವುದೇ ರೀತಿಯ ಭ್ರಷ್ಟಾಚಾರ ನಡೆಸಲು ಅವಕಾಶವಿಲ್ಲ ಎಂದರು.

ಅಬಕಾರಿ ಹಗರಣದಲ್ಲಿ ಸಚಿವ ಆರ್.ಬಿ ತಿಮ್ಮಾಪೂರ ಭಾಗಿಯಾಗಿದ್ದಾರೆ. ಲೋಕಾಯುಕ್ತರು ಅಬಕಾರಿ ಅಧಿಕಾರಿ ಮೇಲೆ ದಾಳಿ ಮಾಡಿದಾಗ 25 ಲಕ್ಷ ರೂ. ಸಿಕ್ಕಿದೆ. ಅವರ ಆಡಿಯೋ ವೈರಲ್ ಆಗಿದೆ. ಈ ಬಗ್ಗೆ ನಾವು ಹೋರಾಟ ಮಾಡಿದ್ದೇವೆ. ಒಂದು ದಿನ ಸತ್ಯ ಹೊರಬರುತ್ತದೆ. ರಾಜ್ಯದ ಮುಖ್ಯ ಮಂತ್ರಿಗಳು ಮೂಡಾ ಹಗರಣದಲ್ಲಿ ಭಾಗಿಯಾಗಿಲ್ಲ ಅಂದರು. ಆದರೆ 14 ಸೈಟ್‌ಗಳನ್ನು ಯಾಕೆ ವಾಪಸ್ಸು ಕೊಟ್ಟರು. ದಲಿತರಿಗೆ ಮೀಸಲಿಟ್ಟ ಎಸ್‌ಸಿಪಿ, ಟಿಎಸ್‌ಪಿ ಸದ್ಬಳಕೆ ಮಾಡಿಲ್ಲ. ಪರಿಶಿಷ್ಟ ಜಾತಿ, ಪಂಗಡಗಳ 7 ನಿಗಮಗಳಿವೆ ಈ ನಿಗಮಗಳಿಗೆ 500 ಕೋಟಿ ಕೊಡಲು ಸಾಧ್ಯವಾಗಿಲ್ಲ. ಯಾರಿಗೂ ಏನೂ ಸಿಗುವುದಿಲ್ಲ. ಹೀಗೆ ದಲಿತರನ್ನು ಕಾಂಗ್ರೆಸ್ ಸರ್ಕಾರ ವಂಚಿಸುತ್ತಿದೆ ಎಂದರು.

ಬಿಜೆಪಿ ಮುಖಂಡ ಆರ್.ರುದ್ರಯ್ಯ, ಲಿಂಗಪ್ಪ ಪರಂಗಿ, ಶರಣಪ್ಪ ಹುನಕುಂಟಿ, ಸಿದ್ದಪ್ಪ ಪರಂಗಿ, ಮಲ್ಲಪ್ಪ ಸರ್ಜಾಪೂರ, ಅಮರಪ್ಪ ಸಾಲಿ, ಶಿವಣ್ಣ ಪರಂಗಿ, ಶಿವಪ್ಪ ಮಾಚನೂರು, ರಾಮಯ್ಯ ಗುತ್ತೇದಾರ, ಇತರರಿದ್ದರು.

# ಅಕ್ಕ ಮಹಾದೇವಿ ಚೈತನ್ಯ ಪೀಠದ ಕೊಡುಗೆ ಅನನ್ಯ



**ಬೀದರ್:ಫೆ.9:** ಸಮಾಜಕ್ಕೆ ಅಕ್ಕ ಮಹಾದೇವಿ ಚೈತನ್ಯ ಪೀಠದ ಕೊಡುಗೆ ಅನನ್ಯ ಎಂದು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಹೇಳಿದರು.

ಆಂಧ್ರಪ್ರದೇಶದ ಶ್ರೀಶೈಲಂನ ಅಕ್ಕ ಮಹಾದೇವಿ ಚೈತನ್ಯ ಪೀಠದಲ್ಲಿ ಶಿವಕರುಣಾ ಯೋಗಾಶ್ರಮ ಚಾರಿಟಬಲ್ ಟ್ರಸ್ಟ್ ಹಾಗೂ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದೊಂದಿಗೆ ಆಯೋಜಿಸಿದ್ದ ಎರಡು ದಿನಗಳ ಅಕ್ಕ ಮಹಾದೇವಿ ಬಹು ಭಾಷಾ ರಾಷ್ಟ್ರೀಯ ವಿಚಾರ ಸಂಕಿರಣ, ಸಾಂಸ್ಕೃತಿಕ ಭವನ ಉದ್ಘಾಟನೆ ಹಾಗೂ ಅಕ್ಕ ಮಹಾದೇವಿ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.
ಅಕ್ಕ ಮಹಾದೇವಿ ಚೈತನ್ಯ ಪೀಠಾಧ್ಯಕ್ಷೆ ಮಾತೆ ಕರುಣಾದೇವಿ ಅವರು ಅಕ್ಕ ಮಹಾದೇವಿ ಅವರ ಆದರ್ಶ ತತ್ವಗಳ ಪ್ರಸಾರ, ಪ್ರಚಾರ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರದ ಬೆಳವಣಿಗೆಗೆ ನಿರಂತರ ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು.

ಸದ್ಯ ಕದಳಿ ವನಕ್ಕೆ ಹೋಗಲು ದಾರಿ ಇಲ್ಲ. ಆದರೆ, ಜಗದ್ಗುರುಗಳ ಸಾನಿಧ್ಯದಲ್ಲಿ ಮಾತೆ ಕರುಣಾದೇವಿ ಅವರು ಜ್ಯೋತಿ ತಂದ ಕಾರಣ ಅದರ ದರ್ಶನ ಪಡೆಯಲು ಸಾಧ್ಯವಾಗುತ್ತಿದೆ. ಪೀಠವು ಗಡಿಯಲ್ಲಿ ಕನ್ನಡದ ಅಸ್ಮಿತೆ ಉಳಿಸುವ ಬಹು ದೊಡ್ಡ ಕಾರ್ಯ ಮಾಡುತ್ತಿದೆ ಎಂದು ಹೇಳಿದರು.

ಶಿವಯ್ಯ ಸ್ವಾಮಿ ಅವರ ಬೇಡಿಕೆಗೆ ಸ್ಪಂದಿಸಿ, ಅಕ್ಕ ಮಹಾದೇವಿ ಚೈತನ್ಯ ಪೀಠದಲ್ಲಿ ಪ್ರತಿ ವರ್ಷ ಅಕ್ಕಮಹಾದೇವಿ ಬಹು ಭಾಷಾ ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜನೆಗೆ ಪ್ರಾಧಿಕಾರದಿಂದ ಶಾಶ್ವತ ಅನುದಾನ ಕಲ್ಪಿಸಲಾಗುವುದು ಎಂದು ಘೋಷಿಸಿದರು.
ಅಧ್ಯಕ್ಷತೆ ವಹಿಸಿದ್ದ ಪೀಠದ ಸಂಚಾಲಕ ಡಾ. ರಾಜಶೇಖರ ಶಿವಾಚಾರ್ಯರು ಮಾತನಾಡಿ, ಮಾತೆ ಕರುಣಾದೇವಿ ಅವರು ಅಕ್ಕ ಮಹಾದೇವಿ ಅವರ ಪ್ರತಿರೂಪವಾಗಿದ್ದಾರೆ. ಸ್ತ್ರೀ ಕುಲದ ಏಳಿಗೆಗೆ ಹತ್ತು ಹಲವು ಕಾರ್ಯಗಳನ್ನು ಕೈಗೊಳ್ಳುತ್ತಿದ್ದಾರೆ ಎಂದು ಹೇಳಿದರು.
ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ ಮಾತನಾಡಿ, ಅಕ್ಕ ಮಹಾದೇವಿ ಚೈತನ್ಯ ಪೀಠವು ದೇಶದ ರಾಜಕೀಯ, ಸಾಮಾಜಿಕ, ಶೈಕ್ಷಣಿಕ, ಸಾಹಿತ್ತಿಕ ಸೇರಿದಂತೆ ವಿವಿಧ ಕ್ಷೇತ್ರಗಳ ಮಹಿಳಾ ಸಾಧಕಿಯರಿಗೆ ಅಕ್ಕಮಹಾದೇವಿ ರಾಷ್ಟ್ರೀಯ ಪ್ರಶಸ್ತಿ ನೀಡಿ ಪ್ರೋತ್ಸಾಹಿಸುತ್ತಿದೆ ಎಂದು ತಿಳಿಸಿದರು.

ಅಕ್ಕಮಹಾದೇವಿ ಚೈತನ್ಯ ಪೀಠಾಧ್ಯಕ್ಷೆ ಮಾತೆ ಕರುಣಾದೇವಿ ಸಾನಿಧ್ಯ ವಹಿಸಿದ್ದರು. ಧಾರವಾಡದ ಅಕ್ಕನ ಬಳಗಕ್ಕೆ 2024-25ನೇ ಸಾಲಿನ ಅಕ್ಕ ಮಹಾದೇವಿ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಲಾಯಿತು. ಬಳಗದ ಅಧ್ಯಕ್ಷೆ ಗೌರಮ್ಮ ನ್ಯಾಮತಿ ಪ್ರಶಸ್ತಿ ಸ್ವೀಕರಿಸಿದರು.

ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಪ್ರಕಾಶ್ ಮತ್ತಿಹಳ್ಳಿ, ಸದಸ್ಯ ಶಿವಾರೆಡ್ಡಿ ಖ್ಯಾಡದ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತೆಲಂಗಾಣ ಘಟಕದ ಅಧ್ಯಕ್ಷ ನೇತಿ ಮಹೇಶ್ವರ, ಪ್ರಮುಖರಾದ ಡಾ. ಸುಭಾಷ್ ಪಾಟೀಲ, ಕುಶಾಲರಾವ್ ಯಾಬಾ, ರಾಜಶೇಖರ ಬೊಮ್ಮಾ, ಡಾ. ರಾಮಚಂದ್ರ ಗಣಾಪುರ, ಗುಗ್ಗಿ ಬಾಲರಾಮಾಚಾರ್ಯ, ಕೆ.ಸಿ. ಶಂಕರ, ಬಸವರಾಜ ಇಬ್ರಾಹಿಂಪುರ, ಕಂಟೆಪ್ಪ ಭಂಗೂರೆ, ಮಹೇಶ ಪಾಟೀಲ, ಮಹಾದೇವ ಲದ್ದೆ, ಶಕುಂತಲಾ ತಂಬಾಕೆ ಮತ್ತಿತರರು ಇದ್ದರು.
ಪ್ರೊ. ಪ್ರತಾಪ್ ತಂಬಾಕೆ ಸ್ವಾಗತಿಸಿದರು. ಬಸವರಾಜ ಹಾಲಹಳ್ಳಿ ನಿರೂಪಿಸಿದರು. ರಾಕೇಶ್ ಮಠಪತಿ ವಂದಿಸಿದರು.

ಮಾತೆ ಕರುಣಾದೇವಿ ಅವರ ಸಂಕಲ್ಪದ ಫಲವಾಗಿ ಅಕ್ಕಮಹಾದೇವಿ ಚೈತನ್ಯ ಪೀಠ ಅಭಿವೃದ್ಧಿ ಹೊಂದಿದೆ.
ಡಾ. ರಾಜಶೇಖರ ಶಿವಾಚಾರ್ಯ ಅಕ್ಕಮಹಾದೇವಿ ಚೈತನ್ಯ ಪೀಠದ ಸಂಚಾಲಕರು ಕರ್ನಾಟಕ ಸರ್ಕಾರ ಹಾಗೂ ಕೇಂದ್ರ ಸರ್ಕಾರ ಶ್ರೀಶೈಲಂನ ಅಕ್ಕ ಮಹಾದೇವಿ ಚೈತನ್ಯ ಪೀಠದ ಪ್ರಸಾರಾಂಗದ ಸಾಹಿತ್ಯ ಪ್ರಕಟಿಸಬೇಕು. ಶಿವಯ್ಯ ಸ್ವಾಮಿ ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE